ದಾವಣಗೆರೆ, ಬೆಂಗಳೂರು, ಕೋಲಾರ, ಹಾಸನ, ಚಿತ್ರದುರ್ಗ, ವಿಜಯನಗರ, ಬಳ್ಳಾರಿ, ರಾಯಚೂರು, ವಿಜಯಪುರ, ಕಲಬುರ್ಗಿ

ಸಂಪಾದಕರು: ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳ ಪತ್ರಿಕೆ www.pavitrapraja.com

ಪವಿತ್ರ ಪ್ರಜಾ

RNI:KARKAN 2007/22780 DAVANAGERE

ಕನ್ನಡ ದಿನಪತ್ರಿಕೆ

PAVITRAPRAJA KANNADA DAILY PAPER

ಸಂಪುಟ:17 VALUME:17 ಸಂಚಿಕೆ:208 ISSUE:208 ದಿನಾಂಕ:25-06-2023 Date: 25-06-2023 ರವಿವಾರ. SUNDAY ಪುಟ:4 Page:4 ರೂ:2-00 Rs:2-00

ಉಪ ಸಂಪಾದಕರು: ಸುಚಿತ್ರ ಎಸ್.ಒಡೆಯರ್, MBA

Editor: S.K.Wadeyar E-mail: pavitrapraja@gmail.com KA/SK/CTA-806/2021-23 Cell: 9141920642 Sub-Editor: Supritha Wadeyar

ನಾವು ಬಿಬಿಎಂಪಿ ಚುನಾವಣೆ ಮಾಡಲೇಬೇಕು ಯಾರೂ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ: ಡಿಸಿಎಂ



ಬೆಂಗಳೂರು: ಬಿಬಿಎಂಪಿ ಚುನಾವಣೆಯನ್ನು ನಾವು ಮಾಡಲೇಬೇಕು, ಯಾರು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದರು. ಸದಾಶಿವ ನಗರದ ನಿವಾಸದಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಕೋರ್ಟ್ ನಿರ್ದೇಶನ ಪಾಲನೆ ಮಾಡಬೇಕು. ಎಲ್ಲರನ್ನ ವಿಶ್ವಾಸಕ್ಕೆ ತೆಗೆದುಕೊಂಡು ಚುನಾವಣೆ ಮಾಡುತ್ತೇವೆ. ವಾರ್ಡ್ ಎಷ್ಟಿರಲಿದೆ ಎಂದು ಈಗಲೇ ಹೇಳಲು ಬರಲ್ಲ. ಜನರ ಕೈಗೆ ಅಧಿಕಾರ ನೀಡಬೇಕು ಎಂಬುದು ನಮ್ಮ ಉದ್ದೇಶ. ನಿಗಮ ಮಂಡಳಿ ನೇಮಕಕ್ಕೆ ಟೈಮ್ ಲೈನ್ ನೀಡಿದ್ದೇವೆ. ಶಿಫಾರಸು ಮಾಡಿ ಎಂದು ಕಾರ್ಯಕರಿತರಿಗೆ ಸೂಚನೆ ನೀಡಿದ್ದೇನೆ ಎಂದರು. ಕಾರ್ಯಕರ್ತರಿಗೆ ಅಧಿಕಾರ ನೀಡಬೇಕು. ಕಾರ್ಯಕರ್ತರು ಇದ್ರೆನೆ ಪಕ್ಷ ಇರುತ್ತದೆ. ಶಾಸಕರು ಮತ್ತು ಅಧ್ಯಕ್ಷರಿಗೆ ಹೆಸರು ಶಿಫಾರಸು ಮಾಡಲು ಹೇಳಿದ್ದೇವೆ. ನಿಗದಿತ ಸಮಯದೊಳಗೆ ನಿಗಮ ಮಂಡಳಿ ಭರ್ತಿ ಮಾಡುತ್ತೇವೆ ಎಂದರು. ಬಿಜೆಪಿ ಸರ್ಕಾರದಲ್ಲಿ ನೇಮಕವಾದ ನಿಗಮ ಮಂಡಳಿಗಳನ್ನ ಮುಂದುವರಿಸುವ ವಿಚಾರವಾಗಿ ಸದ್ಯಕ್ಕೆ ಇಷ್ಟು ಮಾತನಾಡಿದ್ದೇನೆ ಸಾಕು ಎಂದರು.ಜಿಲ್ಲಾ ಹಾಗೂ ತಾಲೂಕು ಪಂಚಾಯತ್ ಚುನಾವಣೆ ಕೂಡ ಮಾಡುತ್ತೇವೆ. ನಾವು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತೇವೆ. ಅಕ್ಕಿ ವಿಚಾರದಲ್ಲಿ ಸಿಎಂ ಹಾಗೂ ಆಹಾರ ಸಚಿವರು ಮಾತನಾಡುತ್ತಿದ್ದಾರೆ ಎಂದರು. ಗೃಹ ಲಕ್ಷ್ಮಿ ವಿಳಂಬ ವಿಚಾರವಾಗಿ ಮಾತನಾಡಿ ಯಾವಾಗ ಜಾರಿ ಯಾಗುತ್ತದೆ ಎಂಬುದಕ್ಕೆ ನಾಡಿದ್ದು ಸಂಪುಟ ಸಭೆ ಇದೆ. ಮಹಿಳಾ ಮತ್ತು ಮಕ್ಕಳ ಸಚಿವರು ಮಾಹಿತಿ ನೀಡಿದ್ದಾರೆ ಎಂದು ವಿವರಿಸಿದರು.

ಮುಖಂಡರ ಭೇಟಿ, ಸಮಾಲೋಚನೆ: ಡಿಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಅವರ ಸದಾಶಿವನಗರ ನಿವಾಸದಲ್ಲಿ ಮಾಜಿ ಸಂಸದ ವಿಶ್ವಾನಾಥನ್, ಶಾಸಕರಾದ ಎ.ಬಿ. ಪಾಟೀಲ್, ಬಸನಗೌಡ ದದ್ದಲ್ ಹಾಗೂ ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ ದ ಅಧ್ಯಕ್ಷರು ಮತ್ತು ಸದಸ್ಯರು ಭೇಟಿಯಾಗಿ ಸಮಾಲೋಚಿಸಿದರು. ಭೇಟಿಯಾದ ನಾಯಕರು ಡಿಸಿಎಂಗೆ ಅಭಿನಂದನೆ ಸಲ್ಲಿಸಿ, ಬೊಕ್ಕೆ ನೀಡಿ ಸತ್ಕರಿಸಿದರು. ಪ್ರಸಕ್ತ ರಾಜಕೀಯ ಹಾಗೂ ಮುಂಬರುವ ದಿನಗಳಲ್ಲಿ ಅಧಿಕಾರ ಹಂಚಿಕೆ ಸಂದರ್ಭ ತಮಗೂ ಅವಕಾಶ ನೀಡುವಂತೆ ಇಬ್ಬರೂ ಶಾಸಕರು ಕೋರಿದರು. ಉಳಿದಂತೆ ವಿಶ್ವನಾಥ ಸೌಹಾರ್ದ ಭೇಟಿ ಮಾಡಿದ್ದರು. ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ ದ ಮುಖಂಡರು ತಮ್ಮ ಬೇಡಿಕೆ ಪಟ್ಟಿಯನ್ನು ಇದೇ ವೇಳೆ ಡಿಸಿಎಂಗೆ ಸಲ್ಲಿಸಿದರು.

ಅನ್ನಭಾಗ್ಯಕ್ಕೆ ಕೇಂದ್ರ ಸರ್ಕಾರ ಅಕ್ಕಿ ಕೊಡಲಿಲ್ಲ, ನಾವೇನು ಪುಕ್ಕಟ್ಟೆ ಕೇಳಿದ್ದಾ? : ಸಿಎಂ ಸಿದ್ದರಾಮಯ್ಯ

ಬೆಂಗಳೂರು : ಅನ್ನಭಾಗ್ಯಕ್ಕೆ ಕೇಂದ್ರ ಸರ್ಕಾರ ಅಕ್ಕಿ ಕೊಡಲಿಲ್ಲ. ಮೊದಲು ಅಕ್ಕಿ ಕೊಡುತ್ತೇವೆ ಎಂದಿದ್ದರು. ಈಗ ಅಕ್ಕಿ ಕೊಡಲ್ಲ ಅಂತಿದ್ದಾರೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ. ಕರ್ನಾಟಕ ಕನ್ನಡ ಬರಹಗಾರರ ಮತ್ತು ಪ್ರಕಾಶಕರ ಸಂಘದ ವತಿಯಿಂದ ಗಾಂಧಿ ಭವನದಲ್ಲಿ ಆಯೋಜಿಸಿದ್ದ 20ನೇ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅನ್ನಭಾಗ್ಯಕ್ಕೆ ಕೇಂದ್ರ ಸರ್ಕಾರ ಅಕ್ಕಿ ಕೊಡಲಿಲ್ಲ. ಮೊದಲು ಅಕ್ಕಿ ಕೊಡುತ್ತೇವೆ ಎಂದು ನಂತರ ಕೊಡಲ್ಲ ಅಂದರು. ನಾವೇನು ಅಕ್ಕಿಯನ್ನು ಪುಕ್ಕಟ್ಟೆ ಕೇಳಿದ್ವಾ? ತಿಂಗಳಿಗೆ 840 ಕೋಟಿ ರೂಪಾಯಿ ಅಕ್ಕಿಗೆ ಬೇಕು. ಅಕ್ಕಿ ಇಟ್ಕೊಂಡು ಕೊಡಲ್ಲ ಅಂದ್ರೆ ಹೇಗೆ ಎಂದು ಪ್ರಶ್ನಿಸಿದರು. ಹೆಣ್ಣುಮಕ್ಕಳಿಗೆ 2000 ರೂಪಾಯಿ ಕೊಡ್ತೇವೆ ಎಂದಿದ್ದೆವು. ಅದನ್ನು ಕೊಡೋ ಆಕೆ ಎಚ್ಚರಿಕೆಯಿಂದ ಮಾಡಬೇಕಲ್ವಾ? ಜನರ ತೆರಿಗೆ ಹಣ ನಮ್ಮಪ್ಪನ ಮನೆಯದ್ದಾ? ಅದು ಜನರ ಹಣ ಅಲ್ಲೇ. ಅದಕ್ಕೆ ಮಹತ್ವ ಇಲ್ವೇ? ಅದನ್ನು ಬಹಳ ಜಾಣತನದಿಂದ ಖರ್ಚು ಮಾಡಬೇಕಲ್ವಾ?. 200 ಯೂನಿಟ್ ವಿದ್ಯುತ್ ಕೊಡ್ತೇವೆ ಅಂದಿದ್ದೇವೆ. ನಿನಗೂ ಫ್ರೀ ನನಗೂ ಫ್ರೀ ಅಂದ್ರಿ. ಈಗ ಲಿಮಿಟ್ ಮಾಡ್ತೀರ ಅಂತ ಕೇಳ್ತಿದ್ದಾರೆ. 60-70 ಯೂನಿಟ್ ಮಾಡೋರಿಗೆ ಅಷ್ಟು ಕೊಡ್ತೇವೆ. ನೀವು 200 ಯೂನಿಟ್ ಅಂದ್ರಿ ಅಂತ ಕೇಳ್ತಾರೆ. ಇದನ್ನೆಲ್ಲ ಹೇಳಬಾರದು, ಆದ್ರೂ ಹೇಳ್ತೇವೆ ಎಂದು ಸಿದ್ದರಾಮಯ್ಯ ತಿಳಿಸಿದರು.59 ಸಾವಿರ ಕೋಟಿ ರೂಪಾಯಿಯನ್ನು ಗ್ಯಾರಂಟಿಗಳಿಗೆ ನೀಡಬೇಕು. ಕಾಂಗ್ರೆಸ್ ನ ಐದು ಗ್ಯಾರಂಟಿಗಳಿಗೆ ಇಷ್ಟು ಮೊತ್ತದ ಹಣ ಬೇಕಾಗುತ್ತೆ. ಜನರಿಗೆ ಕೊಟ್ಟ ಭರವಸೆ ಜಾರಿಗೆ ಬಜೆಟ್ ಮಂಡಿಸಬೇಕಿದೆ. ಹಿಂದಿನವರು ಯಾವ ಭರವಸೆ ಈಡೇರಿಸಲಿಲ್ಲ. 15 ಲಕ್ಷ ಪ್ರತಿಯೊಬ್ಬರಿಗೆ ಕೊಡ್ತೇವೆ ಅಂದ್ರು ಕೊಟ್ರಾ? ಆದಾಯ ದುಪ್ಪಟ್ಟು ಮಾಡ್ತೇವೆ ಅಂದ್ರು ಮಾಡಿದ್ರಾ ಅಚ್ಛೆ ದಿನ್ ಆಯೇಂಗಾ ಅಂದ್ರು ಏನು ಮಾಡಿದ್ರು? ಯಡಿಯೂರಪ್ಪನವರು ಏನೋ ಹೇಳಿದ್ರು, ಅದಕ್ಕೆ ಕೋಪಿಸಿಕೊಳ್ಬೇಕೋ, ನಗಬೇಕೋ ಗೊತ್ತಿಲ್ಲ. ರೈತರ ಸಾಲ ಮನ್ನಾ ಮಾಡ್ತೇವೆ ಅಂದ್ರು ಮಾಡಿದ್ರಾ? ನೀರಾವರಿಗೆ 1.5 ಲಕ್ಷ ಕೋಟಿ ಕೊಡ್ತೇವೆ ಅಂದ್ರು. ಏನಾದ್ರೂ ಅವರು ಹಣ ಕೊಟ್ರಾ? ಅವರು ಈಗ ಧರಣಿ ಮಾಡ್ತಾರಂತೆ ಎಂದು ಬಿಎಸ್ ವೈ ಧರಣಿಗೆ ಸಿದ್ದರಾಮಯ್ಯ ಎಚ್ಚರಿಕೆ ಕೊಟ್ಟರು. ಸಾಹಿತಿಗಳಿಗೆ ಸಿಎಂ ಅಭಯ.. ಸಾಹಿತಿಗಳು ಅಂದ್ರೆ ಮೆದುಳು ಇದ್ದಂತೆ. ಹಾಗಾಗಿ ಫ್ರೀಡಂ ಆಫ್ ಸ್ಪೀಚ್‌ಗೆ ನೀವು ಹೆದರಬೇಕಿಲ್ಲ. ಇದಕ್ಕೆ ಧಕ್ಕೆ ಬರದಂತೆ ನಾವು ನೋಡಿಕೊಳ್ತೇವೆ. ವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆ ಬರದಂತೆ ಕಾಯ್ತೇವೆ ಎಂದು ಸಾಹಿತಿಗಳಿಗೆ ಸಿಎಂ ಸಿದ್ದರಾಮಯ್ಯ ಅಭಯ ನೀಡಿದರು.

ಮಾ.ಕುಲಪತಿ ಮಲ್ಲಿಕಾಘಂಟಿ ಕೂಡ ಕುರುಬರು. ನಾನು ಕೂಡ ಕುರುಬ. ಇಟ್ಸ್ ಎ ಫ್ಯಾಕ್ಟ್ ಅದ್ರಲ್ಲಿ ಅಂತಾದ್ದೇನು ಇಲ್ಲ. ಇಲ್ಲಿ ಸಮಾಜಕ್ಕೆ ನಾವು ಏನು ಕೊಟ್ವಿ ಅನ್ನೋದು ಮುಖ್ಯ. ಸಮಾಜದ ಅನೇಕ ನ್ಯೂನತೆ ತೆಗೆದು ಹಾಕಬೇಕು. ಅಸಮಾನತೆಯನ್ನ ತೊಡೆದು ಹಾಕಬೇಕು. ಎಲ್ಲಿವರೆಗೆ ಅಸಮಾನತೆ ಇರುತ್ತೆ, ಅಲ್ಲಿಯವರೆಗೆ ದೇಶ ಅಭಿವೃದ್ಧಿಯಾಗಲ್ಲ. ಈ ನಿಟ್ಟಿನಲ್ಲಿ ನಾವೆಲ್ಲರೂ ಗಮನಹರಿಸಬೇಕು ಎಂದು ಸಿಎಂ ಸಿಎಂ ಸಿದ್ದರಾಮಯ್ಯ ಹೇಳಿದ್ರು. ಒಬ್ಬ ವ್ಯಕ್ತಿ ಒಂದು ವೋಟು ಒಂದು ಮೌಲ್ಯ ಮಾಡಿದ್ದೇವೆ. ಅದೇ ರೀತಿ ಸಾಮಾಜಿಕವಾಗಿ ಮೌಲ್ಯ ಇರಬೇಕಲ್ವಾ? ಆರ್ಥಿಕವಾಗಿ ಒಂದು ವೋಟು, ಒಂದು ಮೌಲ್ಯವಿದೆ. ಅದರೆ ಸಾಮಾಜಿಕವಾಗಿ ಒಂದೇ ಮೌಲ್ಯವಿದ್ಯಾ ಪುಸ್ತಕಗಳನ್ನ ಓದಬೇಕು,ಕಲಿಯಬೇಕು. ಜ್ಞಾನದ ಕಲಿಕೆಗೆ ನಾವೆಲ್ಲರೂ ವಿದ್ಯಾರ್ಥಿಗಳೇ. ಯಾರೂ ಇಲ್ಲಿ ಸರ್ವಜ್ಞರಲ್ಲ ಎಂದು ಹೇಳಿದರು.

ಹಂಪಿ ವಿಶ್ರಾಂತ ಕುಲಪತಿ ಡಾ. ಮಲ್ಲಿಕಾ ಗಂಟಿ ಮಾತನಾಡಿ, ನಾನು ಮಾತನಾಡುವಾಗ ಬಹಳ ಎಚ್ಚರಿಕೆಯಿಂದ ಮಾತನಾಡುತ್ತೇನೆ. ಮಾತನಾಡಿದ್ದಕ್ಕೆ ನನ್ನ ಮೇಲೆ ಕೇಸ್ ಬಿದ್ದಿವೆ. ಅಂತಹ ರಾಜಕೀಯ ಪರಿಸ್ಥಿತಿಯಲ್ಲಿ ನಾವಿದ್ದೇವೆ. ನಾಳೆ ನಾನು ಕೋರ್ಟ್‌ಗೆ ಹೋಗಬೇಕಿದೆ. ಹೆಣ್ಣುಮಕ್ಕಳು ಮಾತನಾಡದಂತಹ ಪರಿಸ್ಥಿತಿ ಇದೆ. ನಾನು ಹೇಳಿದ ಒಂದು ಸಾಲನ್ನು ಮಾತ್ರ ಮಾಧ್ಯಮಗಳು ಬಿತ್ತರಿಸುತ್ವೆ, ಅದನ್ನು ಇಟ್ಟುಕೊಂಡು ಪ್ರಚಾರ ಮಾಡ್ತಾರೆ. ವಾಟ್ಸಾಪ್ ಯೂನಿವರ್ಸಿಟಿಯಿಂದ ಪ್ರಚಾರ ಮಾಡ್ತಾರೆ. ನಮಗೆ ಹೇಗೆ ಹೊಡೆಯುತ್ತಾರೆ ಅಂದರೆ ಹೇಳೋಕೆ ಆಗಲ್ಲ. ಹೀಗಾಗಿ ಬರೆದುಕೊಂಡು ಬಂದು ಮಾತಾಡ್ತಿದೇನೆ ಎಂದು ವಿವರಿಸಿದರು.ಉಚಿತ ಬಸ್ ಪ್ರಯಾಣದ ಬಗ್ಗೆ ಸಾಕಷ್ಟು ಚರ್ಚೆ ಮಾಡ್ತಿದಾರೆ. ಪರ ವಿರೋಧ ಚರ್ಚೆಗಳು ನಡೆಯುತ್ತಿವೆ. ಈ ಬಸ್ ಉಚಿತ ಪ್ರಯಾಣ ಬಿಟ್ಟಿಯಲ್ಲ. ಮಹಿಳೆಯರು ಒಂದಲ್ಲ ಒಂದು ರೀತಿ ಹಣ ಕಟ್ತಾರೆ. ಸರ್ಕಾರಕ್ಕೆ ಹಣವನ್ನ ಕೊಟ್ಟಿರುತ್ತಾರೆ. ಅದನ್ನೇ ಪುನಃ ಅವರಿಗೆ ಕೊಡ್ತಿದಾರೆ ಅಷ್ಟೇ. ಮಹಿಳೆಯರಿಗೆ ಪ್ರಯಾಣದ ಸ್ವಾತಂತ್ರ್ಯ ಕೊಟ್ಟಿದ್ದಾರೆ. ಇದನ್ನ ಕಿತ್ತುಕೊಳ್ಳಬೇಡಿ ಎಂದು ಸಲಹೆ ನೀಡಿದರು.

ಬೆಂಗಳೂರಿನಲ್ಲಿ ಜನಪ್ರಿಯತೆ ಪಡೆಯದ ಕಾಮನ್ ಮೊಬಿಲಿಟಿ ಕಾರ್ಡ್

ಬೆಂಗಳೂರು: 'ಒಂದು ದೇಶ ಒಂದು ಕಾರ್ಡ್' ಯೋಜನೆಯ ಭಾಗವಾಗಿ ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ(ಓಚಿಟಟಚಿ ಒಜಿಣಡಿಠ) ಇದೇ ವರ್ಷದ ಮಾರ್ಚ್ ಅಂತ್ಯದಲ್ಲಿ ಕಾಮನ್ ಮೊಬಿಲಿಟಿ ಕಾರ್ಡ್‌ಗಳನ್ನು ಬಿಡುಗಡೆ ಮಾಡಲಾಗಿತ್ತು. ಆದ್ರೆ ರಾಷ್ಟ್ರೀಯ ಸಾಮಾನ್ಯ ಸಾರಿಗೆ ಕಾರ್ಡ್‌ಗೆ (National Common Mobility Card-NCMC) ನಿರೀಕ್ಷಿತ ರೀತಿಯಲ್ಲಿ ಉತ್ತಮ ಪ್ರತಿಕ್ರಿಯೆಗಳು ಸಿಗುತ್ತಿಲ್ಲ ಎಂದು ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್‌ನ ಅಧಿಕಾರಿಗಳು ತಿಳಿಸಿದ್ದಾರೆ.

ಬೆಂಗಳೂರು ಮೆಟ್ರೋ ಪ್ರಯಾಣಿಕರಿಗೆ ಟಿಕೆಟ್ ಖರೀದಿಸಲು BMRCL ಸ್ಮಾರ್ಟ್ ವಿಧಾನ ಪರಿಚಯಿಸಿ ಯಾವುದೋ ಕಾಲವಾಗಿದೆ. ಬಿಎಂಆರ್‌ಸಿಎಲ್ ವತಿಯಿಂದ ಇದುವರೆಗೆ ಮಾರಾಟವಾಗಿರುವ 8 ಲಕ್ಷ ಕಾರ್ಡ್‌ಗಳ ಪೈಕಿ ಕೇವಲ 4,500 ರಾಷ್ಟ್ರೀಯ ಸಾಮಾನ್ಯ ಸಂಚಾರ ಕಾರ್ಡ್‌ಗಳನ್ನು ಬೆಂಗಳೂರಿನಲ್ಲಿ ವಿತರಿಸಿದೆ. ವೈಟ್‌ಫೀಲ್ಡ್-ಕೆಆರ್ ಪುರಂ ಮೆಟ್ರೋ ಮಾರ್ಗ ಉದ್ಘಾಟನೆ ಸಂದರ್ಭದಲ್ಲಿ ಕಳೆದ ಮಾರ್ಚ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ NCMC ಕಾರ್ಡ್‌ಗಳಿಗೆ ಚಾಲನೆ ಕೊಟ್ಟಿದ್ದರು.

BMRCL ಅಧಿಕಾರಿಗಳು ಹೇಳುವಂತೆ ಮುಂಬೈ ಹೊರತುಪಡಿಸಿ, ಇತರೆ ಎಲ್ಲಾ ಮೆಟ್ರೋ ನಗರಗಳಲ್ಲಿ NCMC ಕಾರ್ಡ್‌ಗಳಿಗೆ ಉತ್ತಮ ಪ್ರತಿಕ್ರಿಯೆ ಸಿಗುತ್ತಿಲ್ಲ. ಬಹುಶಃ ಮುಂಬೈನ ಸಾರಿಗೆ ಏಜೆನ್ಸಿಗಳು NCMC ಕಾರ್ಡ್‌ಗಳನ್ನು ಪ್ರಾರಂಭಿಸುವವರೆಗೆ ತಮ್ಮದೇ ಆದ (ಸ್ಮಾರ್ಟ್) ಕಾರ್ಡ್‌ಗಳನ್ನು ಹೊಂದಿರಲಿಲ್ಲ. ಆದ್ದರಿಂದ NCMC ಕಾರ್ಡ್‌ಗಳ ಬಳಕೆಯು ಮುಂಬೈನಲ್ಲಿ ವ್ಯಾಪಕವಾಗಿದೆ. ಆದರೆ ಕೋಲ್ಕತ್ತಾ, ಕೊಚ್ಚಿ, ಬೆಂಗಳೂರು ಮತ್ತು ದೆಹಲಿಯಲ್ಲಿ ಪ್ರಯಾಣಿಕರು ತಮ್ಮದೇ ಆದ ಮೆಟ್ರೋ ಕಾರ್ಡ್‌ಗಳನ್ನು ಹೊಂದಿರುವುದರಿಂದ ಯಾರು ಕೂಡ ಕಾಮನ್ ಮೊಬಿಲಿಟಿ ಕಾರ್ಡ್‌ಗಳನ್ನು ಪಡೆಯುತ್ತಿಲ್ಲ ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಅಂಜುಮ್ ಪರ್ವೇಜ್ ತಿಳಿಸಿದರು.

BMRCL ನ ಕಾರ್ಯಾಚರಣೆ ಮತ್ತು ನಿರ್ವಹಣೆ ವಿಭಾಗದ ಪ್ರಕಾರ, ಇತ್ತೀಚೆಗೆ ಸಂಸ್ಥೆಯು ದಿನಕ್ಕೆ 30-35 NCMC ಗಳನ್ನು ಮಾರಾಟ ಮಾಡುತ್ತಿದೆ. ಆದರೆ ತಡೆರಹಿತ ಪ್ರಯಾಣ ಮತ್ತು ಪಾವತಿಯನ್ನು ಸಕ್ರಿಯಗೊಳಿಸಲು ಉದ್ದೇಶಿಸಲಾದ ಕಾರ್ಡ್‌ಗೆ ಹೆಚ್ಚಿನ ಆದ್ಯತೆ ಅಥವಾ ಜನಪ್ರಿಯತೆ ಸಿಗುತ್ತಿಲ್ಲ.

ರಾಷ್ಟ್ರೀಯ ಸಾಮಾನ್ಯ ಮೊಬಿಲಿಟಿ ಕಾರ್ಡ್ ಎಂದರೇನು ರುಪೇ ಪೇಮೆಂಟ್ ವ್ಯವಸ್ಥೆಯ ಆಧಾರದಲ್ಲಿ ಸಾಮಾನ್ಯ ಮೊಬಿಲಿಟಿ ಕಾರ್ಡ್ ಕೆಲಸ ಮಾಡುತ್ತದೆ. ಬಸ್, ಪಾರ್ಕಿಂಗ್‌ಗಾಗಿ ಸೇರಿದಂತೆ ಎಲ್ಲಾ ಕಡೆಯ ಮೆಟ್ರೋ ಸಂಪರ್ಕ, ರೀಟೇಲ್ ಶಾಪಿಂಗ್‌ಗಳಲ್ಲಿ ಒಂದೇ ಕಾರ್ಡ್ ಮೂಲಕ ವ್ಯವಹರಿಸಬಹುದು. ಬ್ಯಾಂಕ್‌ನಿಂದ ನೀಡಲಾಗುವ ರೂಪೇ ಡೆಬಿಟ್ ಅಥವಾ ಕ್ರೆಡಿಟ್ ಕಾರ್ಡ್‌ನಂತೆಯೇ ಸಾಮಾನ್ಯ ಮೊಬಿಲಿಟಿ ಕಾರ್ಡ್ ಕೂಡ ಇರುತ್ತದೆ. ಈ ರೂಪೇ ಕಾರ್ಡ್ ಅನ್ನು ಪಾಲುದಾರ ಬ್ಯಾಂಕಿನ ಡೆಬಿಟ್/ಕ್ರೆಡಿಟ್ ಅಥವಾ ಪ್ರಿಪೇಯ್ಡ್ ಕಾರ್ಡ್ ರೂಪದಲ್ಲಿ ನೀಡಬಹುದು. 'ಒಂದು ದೇಶ, ಒಂದು ಕಾರ್ಡ್' ಎಂಬ ಪರಿಕಲ್ಪನೆಯಡಿ ಕಾರ್ಡ್ ರೂಪಿಸಿದ್ದು, ಇಡೀ ದೇಶದ ಮೆಟ್ರೋದಲ್ಲಿ ಇದನ್ನು ಬಳಸಬಹುದು. ಬೆಂಗಳೂರಿನ ಮೆಟ್ರೋ ಪ್ರಯಾಣಿಕರು ಈ ಕಾರ್ಡ್ ಹೊಂದಿದ್ದರೆ ದೇಶದ ಯಾವುದೇ ಮೆಟ್ರೋದ್ದಲೂ ಪ್ರಯಾಣಿಸಬಹುದು, ಹಾಗೂ ತಮ್ಮ ಎಲ್ಲಾ ಪೇಮೆಂಟ್‌ಗೂ ಡೆಬಿಟ್, ಕ್ರೆಡಿಟ್ ಕಾರ್ಡ್‌ನಂತೆ ಬಳಸಬಹುದು.

ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿಲ್ಲ : ಕಟೀಲ್

ಬೆಂಗಳೂರು: ಪಕ್ಷದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿಲ್ಲ. ಈ ಕುರಿತಂತೆ ಮಾಧ್ಯಮಗಳಲ್ಲಿ ಬರುತ್ತಿರುವ ಮಾಹಿತಿ ಸತ್ಯಕ್ಕೆ ದೂರವಾದುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಸಂಸದ ನಳಿನ್ ಕುಮಾರ್ ಕಟೀಲ್ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಳ್ಳಾರಿಯಲ್ಲಿ ವಿ. ಸೋಮಣ್ಣ ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷೆಯನ್ನು ಪ್ರಕಟಿಸಿದ ಕುರಿತ ಪ್ರಶ್ನೆಗೆ ಉತ್ತರಿಸುವ ವೇಳೆ ಸೋಲಿನ ನೈತಿಕ ಹೊಣೆ ಹೊರುತ್ತೇನೆ. ಸೋಲಿನ ಕಾರಣಗಳ ಕುರಿತಂತೆ ಪಕ್ಷದ ಹಿರಿಯರಿಗೆ ಮಾಹಿತಿ ನೀಡಿದ್ದೇನೆ. 4 ವರ್ಷಗಳಿಂದ ನಾನು ಅಧ್ಯಕ್ಷ ಸ್ಥಾನದಲ್ಲಿದ್ದೇನೆ ಎಂದು ತಿಳಿಸಿದ್ದಾಗಿ ಅವರು ಸ್ಪಷ್ಟಪಡಿಸಿದ್ದಾರೆ.ಪಕ್ಷದ ರಾಜಜ್ಯಾಧ್ಯಕ್ಷರ ನೇಮಕ ಕುರಿತಂತೆ ಪಕ್ಷವು ಸೂಕ್ತ ಸಂದರ್ಭದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಅವರು ತಿಳಿಸಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾಗಿ ನಾನು ಹೇಳಿಲ್ಲ. ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿ ಸುದ್ದಿ ಬಿತ್ತರಿಸಲಾಗುತ್ತಿದೆ ಎಂದು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಕರ್ನಾಟಕದ ಜನರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರವೇ ಅಕ್ಕಿ ಕೊಡಬೇಕು: ಮಲ್ಲಿಕಾರ್ಜುನ ಖರ್ಗೆ

ಬೆಂಗಳೂರು: ಕರ್ನಾಟಕದ ಜನರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರವೇ ಅಕ್ಕಿ ಕೊಡಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದ್ದಾರೆ. ಹೆಚ್ಚುವರಿ ಅಕ್ಕಿ ಪೂರೈಸಲು ಕೇಂದ್ರ ಸರ್ಕಾರ ನಿರಾಕರಣೆ ವಿಚಾರವಾಗಿ ನಗರದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಈ ವಿಚಾರವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿದೆ ಎಂದು ಟೀಕಿಸಿದರು.

ನಾವೇನು ಸುಮ್ಮನೆ ಅಕ್ಕಿ ಕೇಳುತ್ತಿಲ್ಲ, ಹಣ ಕೊಡುತ್ತೇವೆ ಎಂದು ಹೇಳಿದ ಎಐಸಿಸಿ ಅಧ್

ಜೂ.27 ಕ್ಕೆ ಎಐಟಿಯುಸಿಯಿಂದ ಹಲವುಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ

ದಾವಣಗೆರೆ:ಆರೋಗ್ಯ ಇಲಾಖೆಯ ಇ- ಸರ್ವೆಯಿಂದ ಮುಕ್ತಗೊಳಿಸ ಬೇಕೆಂಬುದು ಸೇರಿದಂತೆ ಮತ್ತಿತರ ಬೇಡಿಕೆಗಳನ್ನು ಈಡೇರಿ ಸುವಂತೆ ಒತ್ತಾಯಿಸಿ ಜೂ.27 ರಂದು ಬೆಳಗ್ಗೆ 11 ಕ್ಕೆ ಜಯದೇ ವವೃತ್ತದಲ್ಲಿ ಒಂದು ದಿನದ ಚಳುವಳಿ ನಡೆಸಲಾಗು ವುದು ಎಂದು ಕರ್ನಾಟಕ ರಾಜ್ಯ ಅಂಗ ನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಫೆಡರೇಷನ್ ಜಿಲ್ಲಾಸಮಿತಿಯ ಅಧ್ಯಕ್ಷೆ ಎಂ.ಬಿ ಶಾರದಮ್ಮ ಹೇಳಿ ದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರುಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಕಳೆದ 4 ವರ್ಷಗಳ ಹಿಂದೆ ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಲಾಗಿ ರುವ ಮೊಬೈಲ್‌ಗಳು ಕಳಪೆ ಗುಣಮಟ್ಟದಿಂದ ಕೂಡಿದ್ದಾಗಿದ್ದು, ಬಹುತೇಕ ಹಾಳಾಗಿದೆ. ಮೊಬೈಲ್ ಗಳಲ್ಲಿ ಮಾಹಿತಿ ಸಂಗ್ರಹ ಸೇರಿದಂತೆ ಮತ್ತಿತರೆ ಕೆಲಸ ನಿರ್ವಹಿಸುವುದು ಕಷ್ಟಕರವಾಗಿರುತ್ತದೆ. ಇದರೊಂದಿಗೆ ಆರೋಗ್ಯ ಇಲಾಖೆಯ ಕಾರ್ಯಕ್ರಮವಾದ ಆರೋಗ್ಯ ಸಮೀಕ್ಷೆಯನ್ನು ಅಂಗನ ವಾಡಿ ಕಾರ್ಯಕರ್ತೆಯರು ನಿರ್ವಹಿಸಿ ತಮ್ಮ ಮೊಬೈಲ್‌ಗಳಲ್ಲಿ ಮಾಹಿತಿ ಗಳನ್ನು ಅಪ್ ಲೋಡ್ ಮಾಡಲು ತೀವ್ರ ಒತ್ತಡ ಹೇರಲಾಗುತ್ತಿದೆ. ಈ ಕುರಿತಂತೆ ಹಲವಾರು ಬಾರಿ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಸಹ ಕಾರ್ಯಕ ರ್ತೆಯರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಗಮನಹರಿಸದೆ ಸಮೀಕ್ಷೆ ಮಾಡದಿದ್ದಲ್ಲಿ ಸಸ್ಪೆಂಡ್ ಮಾಡುವುದಾಗಿ ಗೌರವಧನ ಕಡಿತಗೊಳಿ ಸುವುದಾಗಿ, ಶಿಸ್ತು ಕ್ರಮ ಕೈಗೊಳ್ಳುವುದಾಗಿ ಬೆದರಿಕೆ ಒಡ್ಡಲಾಗುತ್ತಿದೆ. ಇದು ಅಂಗನವಾಡಿ ಕಾರ್ಯಕರ್ತೆಯರ ಮೇಲೆ ನಡೆಸುವ ಮಾನಸಿಕ ದೌರ್ಜನ್ಯ ಮತ್ತು ಕಿರುಕುಳವಾಗಿರುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಆರೋಗ್ಯ ಇಲಾಖೆ ಸಮೀಕ್ಷೆ ಯೂ ಸೇರಿದಂತೆ ಬೇರೆ ಕೆಲಸಗಳಿಗೆ ಅಂಗನವಾಡಿ ಕಾರ್ಯಕರ್ತೆ ಯರನ್ನು ಬಳಸಿಕೊಳ್ಳಬಾರದು.ಕಳಪೆ ಗುಣಮಟ್ಟದ ಮತ್ತು ಹಾಳಾಗಿರುವ ಮೊಬೈಲ್‌ಗಳನ್ನು ಕೂಡಲೆ ವಾಪಸ್ ಪಡೆದು ಹೊಸ ಮೊಬೈಲ್ ಅಥವಾ ಮಿನಿ ಟ್ಯಾಬ್‌ಗಳನ್ನು ನೀಡಬೇಕು. ಅಂಗನವಾಡಿಗಳಿಗೆ ಸರಬರಾಜು ಮಾಡು ತ್ತಿರುವ ಮೊಟ್ಟೆ ಖರೀದಿಯ ಜವಾಬ್ದಾರಿ ಯನ್ನು ಬಾಲವಿಕಾಸ ಸಮಿತಿಗೆ ನೀಡಬೇಕು.ಬಹುತೇಕ ಜಿಲ್ಲೆಗ ಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗ ನವಾಡಿ ಕೇಂದ್ರಗಳ ಬಾಕಿ ಉಳಿದಿರುವ ಆರುತಿಂಗಳ ಬಾಡಿಗೆ ಹಣ ಕೂಡಲೇ ಬಿಡುಗಡೆ ಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಚಳುವಳಿ ಮಾಡಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಎಸ್ ಎಸ್ ಮಲ್ಲಮ್ಮ, ವಿಶಾಲಾಕ್ಷಿ,ಕೆ.ಸಿ ನಿರ್ಮಲ,ಗೀತಾ, ಸರ್ವಮ್ಮ, ಆವರಗೆರೆ ವಾಸು,ಸುಧಾ,ರೇಣುಕಾ ಇದ್ದರು.

16ನೇ ವಾರ್ಡ್‌ನಲ್ಲಿ ಗೃಹ ಜ್ಯೋತಿ ಯೋಜನೆಗೆ ನೋಂದಣಿ ವ್ಯವಸ್ಥೆ : ಎ.ನಾಗರಾಜ

ದಾವಣಗೆರೆ: ಕಾಂಗ್ರೆಸ್ ಪಕ್ಷದ ಯೋಜನೆಗಳ ಲ್ಲೊಂದಾದ ಗೃಹ ಜ್ಯೋತಿ ಉಚಿತ ವಿದ್ಯುತ್ ಯೋಜನೆಗೆ ಸಾರ್ವಜನಿಕರಿಗೆ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳಲು ತಿಳಿಸಲಾಗಿದೆ. ಈ ಹಿನ್ನಲೆಯಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯ 16ನೇ ವಾರ್ಡ್ ವಿನೋಬನಗರದ 3ನೇ ಮೇನ್ 3ನೇ ಕ್ರಾಸ್‌ನ ನಮ್ಮ ಜನ ಸಂಪರ್ಕ ಕಚೇರಿಯಲ್ಲಿ ಸಾರ್ವಜನಿಕರಿಗೆ ಉಚಿತ ವಿದ್ಯುತ್ ಯೋಜನೆಯ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಆಧಾರ್ ಕಾರ್ಡ್, ವಿದ್ಯುತ್ ಬಿಲ್ ಸೇರಿದಂತೆ ಅದಕ್ಕೆ ಸಂಬಂಧಿಸಿದ ದಾಖಲೆಗಳೊಂದಿಗೆ ಬಂದು ಇಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪಾಲಿಕೆ ವಾರ್ಡ್ ಸದಸ್ಯ ಎ.ನಾಗರಾಜ ತಿಳಿಸಿದ್ದಾರೆ.ಕಳೆದೆರಡು ದಿನಗಳಿಂದ ಸರ್ವರ್ ಸಮಸ್ಯೆ ಕಂಡು ಬಂದಿದ್ದು, ಬಹಳ ಜನರು, ವಯಸ್ಸಾದವರು ಬಂದು ಸರತಿಯಲ್ಲಿ ನಿಂತು ಸರ್ವರ್ ಇಲ್ಲದೇ ವಾಪಾಸ್ ತೆರಳಿದ ಘಟನೆಗಳು ಸಹಾ ನಡೆದಿವಿ. ಎಲ್ಲೆಡೆ ನೋಂದಣಿ ಕಾರ್ಯ ನಡೆಯುತ್ತಿರುವುದರಿಂದ ಸ್ವಲ್ಪ ಸರ್ವರ್ ತೊಂದರೆ ಇರಬಹುದು. ಅಲ್ಲದೇ ಸಾರ್ವಜನಿಕರು ತಮ್ಮ ಮೊಬೈಲ್‌ಗಳ ಮೂಲಕವೂ ಸಹಾ ಗೃಹ ಜ್ಯೋತಿ ಉಚಿತ ವಿದ್ಯುತ್ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಬಿಸಿಯೂಟ ಸೇವಿಸಿ ನಿಂಬೂರ್ ಸರ್ಕಾರಿ ಪ್ರೌಢಶಾಲೆ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥ, ಆಸ್ಪತ್ರೆಗೆ ದಾಖಲು

ಬೀದರ್: ಸರ್ಕಾರಿ ಶಾಲೆಯಲ್ಲಿ ಬಿಸಿಯೂಟ ಸೇವನೆ ಮಾಡಿದ್ದ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹೊಟ್ಟೆನೋವು ವಾಂತಿಭೇದಿ ಕಾಣಿಸಿಕೊಂಡಿರುವ ಹಿನ್ನಲೆ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿರುವ ಪ್ರಕರಣ ಶುಕ್ರವಾರ ರಾತ್ರಿ ಜರುಗಿದೆ. ಬೀದರ್ ಜಿಲ್ಲೆಯ ಹುಮನಾಬಾದ ತಾಲೂಕಿನ ನಿಂಬೂರ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಮಕ್ಕಳು ಮಧ್ಯಾಹ್ನ ಬಿಸಿಯೂಟದ ಅನ್ನ ಸಾಂಬಾರ್ ಸೇವನೆ ಮಾಡಿದ್ದರಿಂದ ಹೊಟ್ಟೆ ನೋವು ವಾಂತಿ ಭೇದಿ ಕಾಣಿಸಿಕೊಂಡು ಅಸ್ವಸ್ಥಗೊಂಡಿದ್ದರು.ಶಾಲೆಯ ಕೆಲವೇ ವಿದ್ಯಾರ್ಥಿಗಳಲ್ಲಿ ಮೊದಲು ಹೊಟ್ಟೆ ನೋವು ವಾಂತಿ ಭೇದಿ ಶುರುವಾಗಿರುವುದು ಕಂಡು ಬಂದಿತು. ನಂತರ ಮನೆಗೆ ತೆರಳಿದ ಇನ್ನುಳಿದ ವಿದ್ಯಾರ್ಥಿಗಳಲ್ಲಿಯು ವಾಂತಿ ಭೇದಿ ಕಾಣಿಸಿಕೊಂಡಿದೆ. ವಿದ್ಯಾರ್ಥಿಗಳು ವಾಂತಿ ಭೇದಿಯಿಂದ ಆಸ್ಪತ್ರೆಗೆ ದಾಖಲಾದ ಸುದ್ದಿ ತಿಳಿದು, ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ, ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ ಭೇಟಿ ನೀಡಿ ವೈದ್ಯರೊಂದಿಗೆ ಚರ್ಚಿಸಿ ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದರು.ಊಟದ ವ್ಯತ್ಯಾಸದಲ್ಲಿ ಏರುಪೇರು ಆಗಿದ್ದರಿಂದ ಈ ಸಮಸ್ಯೆ ಆಗಿದೆ. ಭಯಪಡುವ ಯಾವುದೇ ಸಮಸ್ಯೆ ಇಲ್ಲ. ಎಲ್ಲ ವಿದ್ಯಾರ್ಥಿಗಳು ಬೇಗ ಗುಣಮು ಖರಾಗಲಿದ್ದಾರೆ ಎಂದು ಪಟ್ಟಣದ ಸರ್ಕಾರಿ ಆಸ್ಪತ್ರೆಯ ಮುಖ್ಯಾಧಿಕಾರಿ ಡಾ.ನಾಗನಾಥ ಹುಲಸೂರೆ ತಿಳಿಸಿದ್ದಾರೆ.ನಾನೂ ಈಗಾಗಲೇ ವೈದ್ಯರೊಂದಿಗೆ ಚರ್ಚಿಸಿರುವೆ. ವೈದ್ಯರು ಭಯಪ ಡುವಂತಹದ್ದೇನು ಇಲ್ಲವೆಂದು ತಿಳಿಸಿದ್ದಾರೆ. ವಿದ್ಯಾರ್ಥಿಗಳು ಬೇಗ ಗುಣಮುಖರಾಗಿ, ಮೊದಲಿನಂತೆ ಶಾಲೆಗೆ ಬರಲಿದ್ದಾರೆ. ಪಾಲಕರು ಮಕ್ಕಳ ಆರೋಗ್ಯದ ಬಗ್ಗೆ ಹೆದರ ಬೇಕಾಗಿಲ್ಲ. ವೈದ್ಯರು ಕಾಳಜಿ ವಹಿಸಿ ವೈದ್ಯೋಪಚಾರ ಮಾಡಿದ್ದಾರೆ ಎಂದು ಪೋಷಕರಿಗೆ ಶಾಸಕ ಡಾ ಸಿದ್ದಲಿಂಗಪ್ಪ ಪಾಟೀಲ ಹೇಳಿದರು.

ಹಲ್ಲಿ ಬಿದ್ದ ಸಾರು ಸೇವಿಸಿದ್ದ 23 ವಿದ್ಯಾರ್ಥಿಗಳು ಅಸ್ವಸ್ಥ.. ಶಾಲೆ ಆರಂಭವಾಗಿ ಜೂನ್? ತಿಂಗಳಲ್ಲಿ ಮಕ್ಕಳು ಬಿಸಿಯೂಟ ಸೇವಿಸಿ ಅಸ್ವಸ್ಥರಾಗಿರುವ ಪ್ರಕರಣಗಳು ಅಲ್ಲಲ್ಲಿ ಬೆಳಕಿಗೆ ಬಂದಿವೆ. ಇಂಥ ಘಟನೆ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಾರೂಗೊಪ್ಪ ಗ್ರಾಮದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ 23 ಮಕ್ಕಳು ಅನ್ನ ಸಾರು ಸೇವಿಸಿ ಅಸ್ವಸ್ಥಗೊಂಡಿದ್ದರು.ಜೂನ್ 19ರಂದು ಬೆಳಗ್ಗೆ ವಿದ್ಯಾರ್ಥಿಗಳು ಉಪಹಾರ ಸೇವಿಸಿದ್ದರು. ಚಪಾತಿ, ಅನ್ನ ಸಾರು ನೀಡಲಾಗಿತ್ತು. ಸಾರಿಗೆ ಹಲ್ಲಿ ಬಿದ್ದಿದೆ. ಅದೇ ಸಾರನ್ನು ವಿದ್ಯಾರ್ಥಿಗಳು ಸೇವಿಸಿದ್ದು ಕೆಲ ಸಮಯದ ನಂತರ ಹೊಟ್ಟೆ ನೋವು, ವಾಂತಿಭೇದಿ ಕಾಣಿಸಿಕೊಂಡಿತ್ತು. ತಕ್ಷಣವೇ ಆ ವಿದ್ಯಾರ್ಥಿಗಳನ್ನು ವಸತಿ ನಿಲಯದ ಸಿಬ್ಬಂದಿ ಸಮೀಪದ ಇಂಚಲ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಕೆಲವು ಮಕ್ಕಳು ಚೇತರಿಸಿಕೊಂಡಿದ್ದು, ಇನ್ನೂ ಕೆಲವರು ಆಸ್ಪತ್ರೆಯಲ್ಲಿದ್ದಾರೆ.

ಸವದತ್ತಿ ತಾಲೂಕು ಹಿಂದುಳಿದ ವರ್ಗಗಳ ಅಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿಗಳು ಸುದ್ದಿ ತಿಳಿಯುತ್ತಿದ್ದಂತೆ ಹಾಸ್ಟೆಲ್?ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಜು.8-9 ರಂದು ದೇಸಿ ಜಗಲಿ ಕಥಾ ಕಮ್ಮಟ

ದಾವಣಗೆರೆ: ಬೆಂಗಳೂರಿನ ವೀರಲೋಕ ಪ್ರಕಾಶನ ವತಿಯಿಂದ ದಾವಣ ಗೆರೆಯ ಶ್ರೀ ಸಿದ್ದಗಂಗಾ ಶಾಲೆಯ ಸಹಯೋಗದಲ್ಲಿ ಜುಲೈ 8 ಮತ್ತು 9 ರಂದು ಬೆಳಿಗ್ಗೆ 10 ಸಂಜೆ 5 ಎರಡು ದಿನಗಳ ಕಾಲ 'ದೇಸಿ ಜಗಲಿ ಕಥಾ ಕಮ್ಮಟವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಾಹಿತಿ ಪಾಪು ಗುರು ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪುಸ್ತಕ ಪ್ರಕಾಶನ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಸದಾ ಹೊಸ ಪ್ರಯೋಗಳನ್ನು ನಡೆಸುತ್ತಿರುವ ವೀರಲೋಕ ಪ್ರಕಾಶನವು ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ನಡೆಯಲಿರುವ ಕಥಾ ಕಮ್ಮಟಗಳಿಗೆ ಪ್ರಾಯೋಜಕತ್ವವನ್ನು ವಹಿಸಿಕೊಂಡಿದೆ ಎಂದರು.ಕಮ್ಮಟದ ನಿರ್ದೇಶಕರಾಗಿ ಸಂತೆಬೆನ್ನೂರು ಫೈಜ್ನಾಟ್ರಾಜ್ ಮತ್ತು ಇಂದ್ರಕುಮಾರ್.ಹೆಚ್.ಬಿ ಆಯ್ಕೆಯಾಗಿದ್ದಾರೆ . ಜುಲೈ 8 ರ ಮುಂಜಾನೆ 10 ಗಂಟೆಗೆ ಕಮ್ಮಟದ ಕಾರ್ಯಕ್ರಮವನ್ನು ಖ್ಯಾತ ಕಥೆಗಾರರಾದ ಲೋಕೇಶ್ ಅಗಸನಕಟ್ಟೆ ಉದ್ಘಾಟನೆ ಮಾಡಲಿದ್ದಾರೆ . ಮುಖ್ಯ ಅತಿಥಿಗಳಾಗಿ ಡಾ.ಮಲ್ಲಿಕಾರ್ಜುನ್ ಕಲಮರಹಳ್ಳಿ ಹಾಗೂ ಜಸ್ಟಿನ್ ಡಿಸೋಜಾ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.ಜುಲೈ 9 ನೇ ಭಾನುವಾರ ಸಂಜೆ 5 ಗಂಟೆಗೆ ಕಾರ್ಯಕ್ರಮದ ಸಮಾರೋಪದಲ್ಲಿ ವೀರಲೋಕ ಪ್ರಕಾಶನ ಸಂಸ್ಥೆಯ ಮುಖ್ಯಸ್ಥ ವೀರಕಪುತ್ರ ಶ್ರೀನಿವಾಸ್ ಹಾಗೂ ಹಿರಿಯ ಕಥೆಗಾರರಾದ ಕಾ.ತ .ಚಿಕ್ಕಣ್ಣ ಮತ್ತು ಲಕ್ಷ್ಮಣ್ ಕೊಡಸೆ ಹಾಗೂ ದಾವಣಗೆರೆ ಜಿಲ್ಲೆಯ ಪ್ರಮುಖ ಬರಹಗಾರರು ಭಾಗವಹಿಸಲಿದ್ದಾರೆ ಎಂದರು. ಹಿರಿಯ ಕಥೆಗಾರರಾದ ಕಾ.ತ. ಚಿಕ್ಕಣ್ಣ ಮತ್ತು ಲಕ್ಷ್ಮಣ ಕೊಡಸ ಅವರ ಮಾರ್ಗ ದರ್ಶನದಲ್ಲಿ ನಡೆಯಲಿರುವ ಈ ಕಥಾ ಕಮ್ಮಟಕ್ಕೆ 42 ವರ್ಷದೊಳಗಿನ ಸಾಹಿತ್ಯಾಸಕ್ತ ಯುವ ಜನರು ಅರ್ಜಿ ಸಲ್ಲಿಸಬಹುದಾಗಿದೆ . ಜಿಲ್ಲೆಯ ಯುವ ಕಥೆಗಾರರು ಈ ಕಮ್ಮಟದ ಪ್ರಯೋಜನ ಪಡೆದು ಕೊಳ್ಳಲು ಸೂಚಿಸಿದ . ಆಸಕ್ತರು ವೀರಲೋಕ ಬುಕ್ಸ್ ಕಾಮ್ ಜಾಲತಾಣದಿಂದ https:// veeralokabooks.com/wp content / uploads / 2023 / 05 / desi – jagall – arji.pdf ಈ ಲಿಂಕ್ ಬಳಸಿ ಅರ್ಜಿ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಜೂನ್ 28 ರೊಳಗೆ (ಪಾಪುಗುರು) 9844187574 ವಾಟ್ಸಪ್ ಸಂಖ್ಯೆಗೆ ಅರ್ಜಿ ಕಳುಹಿಸುವುದು.ಹೆಚ್ಚಿನ ಮಾಹಿತಿಗೆ 9844187574 ಸಂಪರ್ಕಿಸಲು ತಿಳಿಸಿ ದರು.ಕಮ್ಮಟದ ಎರಡು ದಿನ ತಿಂಡಿ ಮತ್ತು ಊಟದ ವ್ಯವಸ್ಥೆಯಿರುತ್ತದೆ . ವಸತಿ ವ್ಯವಸ್ಥೆ ಇರುವುದಿಲ್ಲ . ನಾಡಿನ ಪ್ರಮುಖ ಕಥೆಗಾರರು ಭಾಗವಹಿಸಿ ಕಥೆ ಕಟ್ಟುವಿಕೆ ಮತ್ತು ಅದರ ಸೂಕ್ಷ್ಮತೆಗಳ ಬಗ್ಗೆ ಅವಲೋಕಿಸುತ್ತಾರೆ. ಹಾಗೂ ಶಿಬಿರಾರ್ಥಿಗ ಳೊಂದಿಗೆ ಸಂವಾದ ಮಾಡುತ್ತಾರೆ . ಇಲ್ಲಿನ ಉತ್ತಮ ಶಿಬಿರಾರ್ಥಿಗಳ ಕಥೆಗಳು ವೀರಲೋಕ ಪ್ರಕಾಶನದಲ್ಲಿ ಪುಸ್ತಕಗಳಾಗಿ ಮುದ್ರಣಗೊಳ್ಳಲಿವೆ ಎಂದರು.ಕಮ್ಮಟದಲ್ಲಿ ಭಾಗವಹಿಸಲು 25 ಜನರಿಗೆ ಮಾತ್ರ ಅವಕಾಶವಿದ್ದು, . ಪ್ರತಿಯೊಬ್ಬರಿಗೂ ಪ್ರಮಾಣ ಪತ್ರ ಹಾಗೂ ಸ್ಮರಣಿಕೆ ನೀಡಲಾಗುವುದು ಎಂದರು.ಸುದ್ದಿಗೋಷ್ಠಿಯಲ್ಲಿ, ಸಾಹಿತಿ ಹಾಗೂ ಕಥೆಗಾರರಾದ ಫೈಜ್ನಟರಾಜ್ ಹಾಗೂ ಸದಾಶಿವ ಸೊರಟೂರು ಉಪಸ್ಥಿತರಿದ್ದರು.

ಆರೋಗ್ಯ ಸದೃಢತೆಗೆ ಯೋಗ ಭದ್ರ ಬುನಾದಿ-ಬಿ.ಎಸ್.ನೀಲಪ್ಪ

ದಾವಣಗೆರೆ:ಯೋಗಾಸನ ದೈಹಿಕ ಆರೋಗ್ಯದ ಜತೆಯಲ್ಲಿ ಮಾನಸಿಕ ಜ್ಞಾನಾರ್ಚನೆ, ಖಿನ್ನತೆಯ ಮನಸ್ಸುಗಳ ಪರಿವರ್ತನೆಗಳಿಗೆ ಭದ್ರವಾದ ಬುನಾದಿ, ನಮ್ಮ ನಾಡು-ನುಡಿಯ ಸಂಸ್ಕಾರ, ಸಂಸ್ಕೃತಿ, ಸಭ್ಯತೆ, ಶಿಸ್ತು, ಸಮಯಪ್ರಜ್ಞೆ, ಇಚ್ಛಾಶಕ್ತಿ, ಕರ್ತವ್ಯ ಪ್ರಜ್ಞೆ ಈ ಎಲ್ಲಾ ಸಕಾರಾತ್ಮಕ ಚಿಂತನೆಗಳಿಗೆ ಯೋಗಾಸನ ಪೂರಕ ಎಂದು ಶ್ರೀ ಚೈತನ್ಯ ಸಂಚಾರಿ ಯೋಗ ಕೇಂದ್ರದ ಸಂಸ್ಥಾಪಕರು, ಹಿರಿಯ ಯೋಗ ಶಿಕ್ಷಕರಾದ ಬಿ.ಎಸ್.ನೀಲಪ್ಪ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಿದ್ದವೀರಪ್ಪ ಬಡಾವಣೆ ಶಾಖೆಯ ವತಯಿಂದ 10 ದಿನಗಳ ಕಾಲ ಅಂತರಾಷ್ಟ್ರೀಯ ಯೋಗ ದಿನಾಚರಣೆ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸಾರ್ವಜನಿಕ ಉಚಿತ ಯೋಗ ತರಬೇತಿ ಶಿಬಿರ ಸಮಾರೋಪ ಸಮಾರಂಭದಲ್ಲಿ ಅವರು ಸಮಾರೋಪ ನುಡಿಗಳನ್ನಾಡಿದರು. ನಗರದ ಸಿದ್ಧವೀರಪ್ಪ ಬಡಾವಣೆಯ ಶ್ರೀ ಗಣೇಶ ನಿಲಯ ಸಭಾಂಗಣದಲ್ಲಿ ನಿನ್ನೆ ನಡೆದ ಈ ಸಮಾರಂಭದ ವೇದಿಕೆಯಲ್ಲಿ ಉಪಸ್ಥಿತರಿದ್ದ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಮಾತನಾಡಿ, ನಮ್ಮ ನಿಮ್ಮೆಲ್ಲರ ಜೀವನದಲ್ಲಿ ನಾವುಗಳು ಕೇವಲ ಹಣ ಗಳಿಕೆ ಆಸ್ತಿ, ಅಂತಸ್ತು, ಸಂಪಾದನೆಗಳಿಗೆ ಸೀಮಿತವಾಗದೆ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಕಾಳಜಿಯೊಂದಿಗೆ ತೊಡಗಿ ಸಿಕೊಂಡರೆ ನಮ್ಮ ಜೀವನಕ್ಕೆ ಸಾರ್ಥಕತೆ ಬರುತ್ತದೆ. ಯೋಗ ಕೇವಲ ವಿಶ್ವದಿನಾಚರಣೆಗಷ್ಟೇ ಅಲ್ಲದೆ ದಿನಂಪ್ರತಿ ಅನುಸರಿಸಿದರೆ ಎಲ್ಲಾ ರೋಗಗಳಿಗೆ ದಿವ್ಯ ಔಷಧಿ ಅಂದರು.ಸಮಾರಂಭದ ಅಧ್ಯಕ್ಷತೆ ಯನ್ನು ವಹಿಸಿದ್ದ ಕಲಾಕುಂಚ ಸಿದ್ದವೀರಪ್ಪ ಬಡಾವಣೆ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್ ಮಾತನಾಡಿ, ನಮ್ಮ ದೇಹದ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಯೋಗ. ಯೋಗದ ವಿವಿಧ ಆಸನಗಳಿವೆ ಅದನ್ನು ನಾವು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್, ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕ ರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, 10 ದಿನಗಳ ಕಾಲ ಯೋಗ ತರಬೇತಿ ನೀಡಿದ ಯೋಗ ಶಿಕ್ಷಕಿಯರಾದ ಶ್ರೀಮತಿ ಲೀಲಾ ಸುಭಾಷ್, ಸಂಧ್ಯಾ ಶ್ರೀನಿವಾಸ್ ವೇದಿಕೆಯಲ್ಲಿ ಉಪಸ್ಥಿತರಿದ್ದು ಮಾತನಾಡಿ, ಎಲ್ಲಾ ಅನಾರೋ ಗ್ಯದ ನಿವಾರಣೆಗೆ ಯೋಗಾಸನ ಸೂಕ್ತ ಮಾರ್ಗ ಈ ನಿಟ್ಟಿನಲ್ಲಿ ಕಲಾಕುಂಚದ ಈ ಸತ್ಕಾರ್ಯ ಶ್ಲಾಘನೀಯ ಎಂದರು.

ನಿನ್ನೆಯ ದಿನ ಶ್ರೀಮತಿಯವರಾದ ಸುಜಾತ ರಾಘವೇಂದ್ರ, ಸುಮಿತ್ರ ಅನಂತರಾಮರಾವ್‌ರವರ ಪ್ರಾರ್ಥನೆ ಯೊಂದಿಗೆ ಪ್ರಾರಂಭವಾದ ಸಮಾರಂ ಭಕ್ಕೆ ಮಮ ತಾ ಕೊಟ್ರೇಶ್ ಸ್ವಾಗತಿಸಿ ದರು. ಉಚಿತ ಯೋಗ ಶಿಬಿರದಲ್ಲಿ ಪಾಲ್ಗೊಂಡ ಶಿಬಿರಾರ್ಥಿಗಳು ಮಾತನಾ ಡಿ ಅಚ್ಚುಕಟ್ಟಾದ, ಶಿಸ್ತು ಬದ್ಧವಾದ ಈ ಶಿಬಿರ ದಿಂದ, ನಮ್ಮ ದೈಹಿಕ, ಮಾನಸಿಕ ಪರಿವರ್ತ ನೆಗೆ ನಾಂದಿಯಾಯಿತು ಎಂದು ತಮ

ಬೆಂಗಳೂರು: 44 ಬೈಕ್‌ಗಳ ಕದ್ದಿದ್ದ ಇಬ್ಬರು ಅಪ್ರಾಪ್ತ ಬಾಲಕರ ಬಂಧನ

ಬೆಂಗಳೂರು: ನಗರದಲ್ಲಿ ಬೈಕ್ ಕಳ್ಳತನದಲ್ಲಿ ತೊಡಗಿದ್ದ ಇಬ್ಬರು ಅಪ್ರಾಪ್ತ ಬಾಲಕರು ಜೆಪಿ.ನಗರ ಠಾಣೆ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಈ ಇಬ್ಬರು ಅಪ್ರಾಪ್ತ ಬಾಲಕರು ಕೆ.ಆರ್.ಪುರಂ ನಿವಾಸಿಗಳಾಗಿದ್ದು, ಬಾಲಕರಿಂದ 35 ಲಕ್ಷ ಮೌಲ್ಯದ 44 ದ್ವಿಚಕ್ರ ವಾಹನಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಮನೆ ಮುಂದೆ, ಸಾರ್ವಜನಿಕ ಸ್ಥಳಗಳಲ್ಲಿ ನಿಲ್ಲಿಸುತ್ತಿದ್ದ ದ್ವಿಚಕ್ರ ವಾಹನಗಳನ್ನು ಅವರು ಕಳವು ಮಾಡುತ್ತಿದ್ದರು. ಅಂತೆಯೇ ಜೆಪಿ.ನಗರದ 1ನೇ ಹಂತ ನಿವಾಸಿ ವರುಣ್ ಎಂಬುವರ ಬೈಕ್ ಕಳ್ಳತನವಾಗಿತ್ತು. ಈ ಬಗ್ಗೆ ತನಿಖೆ ಕೈಗೆತ್ತಿಕೊಂಡ ಪೊಲೀಸರು, ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿ ಸೇರಿದಂತೆ ತಾಂತ್ರಿಕ ಮಾಹಿತಿ ಆಧರಿಸಿ ಇಬ್ಬರನ್ನು ಬಂಧನಕ್ಕೊಳಪಡಿಸಿದ್ದಾರೆ.ಇಬ್ಬರು ಬಾಲಕರ ವಿರುದ್ಧ ಕಾಡುಗೋಡಿ, ಎಚ್‌ಎಎಲ್, ಕೆಆರ್ ಪುರಂ, ಬನಶಂಕರಿ ಮತ್ತಿತರ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ.

ಪ್ರತಿಪಕ್ಷ ನಾಯಕನ ಸ್ಥಾನಕ್ಕೆ ಯತ್ನಾಳ್-ಬೊಮ್ಮಾಯಿ ನಡುವೆ ತೀವ್ರ ಪೈಪೋಟಿ

ಬೆಂಗಳೂರು:ಬಿಜೆಪಿಯಲ್ಲಿ ವಿಪಕ್ಷ ನಾಯಕನ ಆಯ್ಕೆ ಕಸರತ್ತು ಮುಂದುವರಿದಿದ್ದು, ಅಂತಿಮ ನಿರ್ಧಾರಕ್ಕೆ ಬಿಜೆಪಿ ವರಿಷ್ಠರು ಇನ್ನೂ ಬಂದಿಲ್ಲ. ಪಕ್ಷವನ್ನು ಮುನ್ನಡೆಸಲು ಇಬ್ಬರು ನಾಯಕರ ಹೆಸರು ಮುಂಚೂಣಿಯಲ್ಲಿದ್ದು, ಆದರೆ ಹೈಕಮಾಂಡ್ ಆಯ್ಕೆ ಯಾರು ಎಂಬುವುದು ಕುತೂಹಲ ಕೆರಳಿಸಿದೆ.

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರಿಗೆ ವಿರೋಧ ಪಕ್ಷದ ನಾಯಕನ ಸ್ಥಾನ ಸಿಗುತ್ತಾ? ಅಥವಾ ಕಟ್ಟರ್ ಹಿಂದುತ್ವವಾದಿ ಬಸನಗೌಡ ಪಾಟೀಲ್ ಅವರಿಗೆ ನಾಯಕತ್ವ ನೀಡಲಾಗುತ್ತಾ ಎಂಬ ಪ್ರಶ್ನೆಗೆ ಇನ್ನೂ ಉತ್ತರ ಸಿಕ್ಕಿಲ್ಲ. ಎರಡನೇ ಮುಂಚೂಣಿಯಲ್ಲಿ ಇರುವ ಹೆಸರು ಬಸನಗೌಡ ಪಾಟೀಲ್ ಯತ್ನಾಳ್. ಬಸನಗೌಡ ಪಾಟೀಲ್ ಯತ್ನಾಳ್ ಕುರಿತಾಗಿ ಬಿಜೆಪಿ ಪಕ್ಷದಲ್ಲೇ ಪರ ಹಾಗೂ ವಿರುದ್ಧವಾದ ಅಭಿಪ್ರಾಯಗಳಿವೆ.

ಇದರ ಹೊರತಾಗಿ ವಿಪಕ್ಷ ನಾಯಕ ಸ್ಥಾನಕ್ಕೆ ಆರ್. ಅಶೋಕ್ ಹಾಗೂ ಅಶ್ವತ್ಥ ನಾರಾಯಣ ಹೆಸರುಗಳು ಕೇಳಿಬರುತ್ತಿವೆ. ಇನ್ನೇನು ಜುಲೈ 3 ರಿಂದ ಜಂಟಿ ಅವೇಶನ ನಡೆಯಲಿದೆ. ಅದಕ್ಕೂ ಮೊದಲು ವಿಪಕ್ಷ ನಾಯಕನ ಆಯ್ಕೆ ಮಾಡುವ ನಿಟ್ಟಿನಲ್ಲಿ ಬಿಜೆಪಿ ಹೈಕಮಾಂಡ್ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.ಹಾಗಾದರೆ, ಇಬ್ಬರ ನಡುವೆ ಇರುವ ಸಕಾರ್ಮಾಕ ಹಾಗೂ ನಕಾರತ್ಮಕ ಅಂಶಗಳನೇ ಏನು ಎನ್ನುವುದು ಬಗ್ಗೆ ನೋಡವುದಾದರೆ, ಬಸವರಾಜ ಬೊಮ್ಮಾಯಿ ಸಕರಾತ್ಮಕ ಅಂಶಗಳೇನು?

*ಮಾಜಿ ಸಿಎಂ ಹಾಗೂ ಆಡಳಿತಾತ್ಮಕ ಅನುಭವ ಹೊಂದಿದ್ದಾರೆ ಎಂಬ ಹೆಗ್ಗಳಿಕೆ.*ಲಿಂಗಾಯತರ ಸಮುದಾಯದ ಹಿನ್ನಲೆ ಹಾಗೂ ಪಕ್ಷದಲ್ಲಿ ಹಿರಿತನದ ಅನುಭವ.*ಸಂಸದೀಯ ಪಟು ಎಂಬ ಹೆಗ್ಗಳಿಗೆ, ಹಣಕಾಸು ಮತ್ತು ನೀರಾವರಿ

ವಿಚಾರ ಹಾಗೂ ಕಾನೂನಾತ್ಮನಕವಾಗಿ ಇರುವ ಪರಿಣತಿ.

*ಸಿದ್ದರಾಮಯ್ಯ ಅವರನ್ನು ಸದನದಲ್ಲಿ ಎದುರಿಸಲು ಸದ್ಯಕ್ಕೆ ಬಸವರಾಜ ಬೊಮ್ಮಾಯಿ ಅವರು ಸಮರ್ಥರು ಎಂಬ ಅಭಿಪ್ರಾಯ.

*ಸಮಾಧಾನ ಚಿತ್ತದಿಂದ ಎಲ್ಲವನ್ನು ಹ್ಯಾಂಡಲ್ ಮಾಡುವ ನಿರ್ವಹಣಾ ಕೌಶಲ್ಯ.ನಕರಾತ್ಮಕ ಅಂಶಗಳು*ಲಿಂಗಾಯತ ಸಮುದಾಯದ ಹಿನ್ನೆಲೆ ಹೊಂದಿದ್ದರೂ ಪ್ರಭಾವಿ ನಾಯಕ ಅಲ್ಲ ಎಂಬ ಅಭಿಪ್ರಾಯ.*ಮುಖ್ಯಮಂತ್ರಿ ಯಾಗಿದ್ದರೂ ಶಾಸಕರ ವಿಶ್ವಾಸ ಗಳಿಸಿಕೊಳ್ಳುವಲ್ಲಿ ವಿಫಲ.

*ಮಾಜಿ ಸಿಎಂ ಆದರೂ ಪಕ್ಷವನ್ನು ಮುನ್ನಡೆಸುವಲ್ಲಿ ಹಾಗೂ ವಿಪಕ್ಷವಾಗಿ ಆಕ್ರಮಣಕಾರಿ ಹೋರಾಟ ರೂಪಿಸಲು ವಿಫಲರಾಗಬಹುದು ಎಂಬ ಅಭಿಪ್ರಾಯ.

ಸ್ವಪಕ್ಷೀಯರೇ ಪರೋಕ್ಷವಾಗಿ ಬಸವರಾಜ ಬೊಮ್ಮಾಯಿ ವಿರುದ್ಧ ಹೊಂದಾಣಿಕೆ ರಾಜಕೀಯದ ಆರೋಪ.

*ಪಕ್ಷ ಸರ್ಕಾರದಲ್ಲಿ ಹಿಡಿತ ಸಾಧಿಸುವಲ್ಲಿ ವಿಫಲ.

*ಹಿರಿಯ ಹಾಗೂ ಕಿರಿಯ ನಾಯಕರ ನಡುವೆ ಹೊಂದಾಣಿಕೆ ಮಾಡುವಲ್ಲಿ ವಿಫಲ.*ಸೈದ್ಧಾಂತಿಕವಾಗಿ ಸಂಘಪರಿವಾರದ ಮಾನಸೀಕತೆ ಹೊಂದಿರದೇ ಇರುವುದು.

ಯತ್ನಾಳ್ ಸಕರಾತ್ಮಕ ಅಂಶಗಳು.ಹಿಂದುತ್ವದ ಪರ ಮತ್ತು ಎದುರಾಳಿ ಪಕ್ಷಗಳ ವಿರುದ್ಧ ಆಕ್ರಮಣಕಾರಿ ನಿಲುವು.

*ಯಾರೊಂದಿಗೂ ಸೈದ್ಧಾಂತಿಕ ವಿಚಾರವಾಗಿ ರಾಜಿ ಮಾಡಿಕೊಳ್ಳದೆ ಇರುವ ಸ್ವಭಾವ.*ತಮ್ಮ ಮಾತುಗಳ ಮೂಲಕ ಎದುರಾಳಿಯ ವಿರುದ್ಧ ಮುಗಿಬೀಳುವ ಪ್ರವೃತ್ತಿ.*ಆಡಳಿತ ಪಕ್ಷಕ್ಕೆ ನೇರವಾಗಿ ತಮ್ಮ ಮಾತುಗಳ ಮೂಲಕ ತಿರುಗೇಟು ಕೊಡುತ್ತಾರೆ ಎಂಬ ಅಭಿಪ್ರಾಯ.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ತಂಡದಲ್ಲಿ ಗುರುತಿಸಿಕೊಂಡಿರುವುದು.*ಕೇಂದ್ರ ಸಚಿವರಾಗಿ ಕಾರ್ಯ ನಿರ್ವಹಣೆ ಮಾಡಿದ ಅನುಭವ.ನಕರಾತ್ಮಕ ಅಂಶಗಳೇನು?*ಪಕ್ಷದ ಶಿಸ್ತು ಹಾಗೂ ಚೌಕಟ್ಟನ್ನು ಪದೇ ಪದೇ ಮೀರುತ್ತಿರು ವುದು.*ಪಕ್ಷದಲ್ಲಿ ಹಲವು ಹಿರಿಯ ನಾಯಕರ ಜೊತೆಗಿನ ವೈಯಕ್ತಿಕ ಭಿನ್ನಾಭಿಪ್ರಾಯ.*ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಬಣದ ವಿರೋಧವನ್ನು ಕಟ್ಟುಕೊಂಡಿರುವುದು.

ವಿವಾದಾತ್ಮಕ ಹೇಳಿಕೆಗಳ ಮೂಲಕ ವೈಯಕ್ತಿಕ ವರ್ಚಸ್ಸಿಗೆ ಹಿನ್ನಡೆ ಯಾಗಿರುವುದು.*ಸದನದಲ್ಲಿ ಸಂಸದೀಯ ನಡವಳಿಕೆಯನ್ನು ರೂಢಿಸುತ್ತಿಲ್ಲ ಎಂಬ ಆರೋಪ.

ಬಾರದ ಮಳೆ, ಬತ್ತಿದ ಜಲಾಶಯಗಳು, ನೀರಿನ ಅಭಾವ 'ಗ್ಯಾರಂಟಿ'

ಬೆಂಗಳೂರು, :ಮುಂಗಾರು ಮಳೆ ಕೊರತೆಯಿಂದಾಗಿ ರಾಜ್ಯದಲ್ಲಿ ಕೆಆರ್‌ಎಸ್ ಸೇರಿದಂತೆ ಪ್ರಮುಖ ಜಲಾಶಯಗಳು ಬರಿದಾಗತೊಡಗಿವೆ. ಇದರಿಂದ ಕುಡಿಯುವ ನೀರು ಪೂರೈಕೆ, ವಿದ್ಯುತ್ ಉತ್ಪಾದನೆ ಹಾಗೂ ನೀರಾವರಿ ಬೆಳೆಗಳ ಮೇಲೆ ಮಾರಕ ಪರಿಣಾಮ ಉಂಟಾಗಲಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಮಳೆಯ ಪ್ರಮಾಣ ಹಾಗೂ ಜಲಾಶಯಗಳಲ್ಲಿ ನೀರಿನ ಸಂಗ್ರಹ ಪ್ರಮಾಣವೂ ಗಣನೀಯವಾಗಿ ಕಡಿಮೆಯಾಗಿದೆ. ಕಳೆದ ಮೂರು ವಾರಗಳಲ್ಲಿ ರಾಜ್ಯದಲ್ಲಿ ಶೇ.67ರಷ್ಟು ಮಳೆ ಕೊರತೆ ಉಂಟಾಗಿದೆ. ಕೋಲಾರ ಹೊರತು ಪಡಿಸಿದರೆ, ಉಳಿದೆಲ್ಲಾ ಜಿಲ್ಲೆಗಳಲ್ಲೂ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಶೇ.20ರಷ್ಟು, ಉತ್ತರ ಒಳನಾಡಿನಲ್ಲಿ ಶೇ.68ರಷ್ಟು, ಮುಂಗಾರಿನಲ್ಲಿ ಅತಿಹೆಚ್ಚು ಮಳೆಯಾಗುತ್ತಿದ್ದ ಕರಾವಳಿಯಲ್ಲಿ ಶೇ.74 ಹಾಗೂ ಮಲೆನಾಡಿನಲ್ಲಿ ಶೇ.79ರಷ್ಟು ವಾಡಿಕೆಗಿಂತ ಕಡಿಮೆ ಮಳೆಯಾಗಿದೆ.

ಜೂನ್ ಒಂದರಿಂದ ಜೂ.23ರ ನಡುವಿನ ಅವಯಲ್ಲಿ ರಾಜ್ಯದ ವಾಡಿಕೆ ಮಳೆ ಪ್ರಮಾಣ 145 ಮಿ.ಮೀ.ಇದ್ದು, ಕೇವಲ 48 ಮಿ.ಮೀ.ನಷ್ಟು ಮಾತ್ರ ಮಳೆಯಾದ ವರದಿಯಾಗಿದೆ. ಕರಾವಳಿಯಲ್ಲಿ 584ಮಿ.ಮೀ.ವಾಡಿಕೆ ಮಳೆಗೆ 151ಮಿ.ಮೀ.ನಷ್ಟು ಮಾತ್ರ ಮಳೆಯಾಗಿದೆ. ಅದೇ ರೀತಿ ಮಲೆನಾಡಿನಲ್ಲಿ 250 ಮಿ.ಮೀ.ವಾಡಿಕೆ ಮಳೆಗೆ ಕೇವಲ 52 ಮಿ.ಮೀ.ನಷ್ಟು ಮಳೆಯಾಗಿದೆ. ದಕ್ಷಿಣ ಒಳನಾಡಿನಲ್ಲಿ ವಾಡಿಕೆಯ 55 ಮಿ.ಮೀ.ಗೆ 44 ಮಿ.ಮೀ. ಹಾಗೂ ಉತ್ತರ ಒಳನಾಡಿನಲ್ಲಿ 78 ಮಿ.ಮೀ.ಗೆ ಕೇವಲ 25 ಮಿ.ಮೀ.ನಷ್ಟು ಮಾತ್ರ ಮಳೆಯಾಗಿದೆ.

ಕಾವೇರಿ ಕೊಳ್ಳದಲ್ಲೂ ನೀರಿನ ಅಭಾವ ಹೆಚ್ಚಾಗುತ್ತಿದೆ. ಕಾವೇರಿ

ಜಲಾನಯನ ಭಾಗದಲ್ಲೂ ವಾಡಿಕೆ ಪ್ರಮಾಣದ ಮಳೆಯಾಗಿಲ್ಲ. ಹಾರಂಗಿ, ಹೇಮಾವತಿ, ಕೆಆರ್‌ಎಸ್ ಹಾಗೂ ಕಬಿನಿ ಜಲಾಶಯಗಳ ಒಟ್ಟು ನೀರಿನ ಸಂಗ್ರಹ ಸಾಮಾಥ್ರ್ಯ 114.57 ಟಿಎಂಸಿ ಅಡಿ. ನಿನ್ನೆಯವರೆಗೆ 31.41 ಟಿಎಂಸಿ ಅಡಿಯಷ್ಟು ನೀರಿದೆ. ಕಳೆದ ವರ್ಷ ಇದೇ ಅವಯಲ್ಲಿ 65.82 ಅಡಿಯಷ್ಟಿತ್ತು. ಅಂದರೆ ಶೇ.50ಕ್ಕಿಂತಲ್ಲೂ ಅಕ ಪ್ರಮಾಣದ ನೀರಿನ ಸಂಗ್ರಹ ಕಡಿಮೆಯಾಗಿದೆ. ಒಳ ಹರಿವು ಕೇವಲ 877ಕ್ಯುಸೆಕ್ಸ್ ಇದ್ದು, ಹೊರ ಹರಿವು 3191ಕ್ಯುಸೆಕ್‌ನಷ್ಟಿದೆ.

ಹಾರಂಗಿಯಲ್ಲಿ 2.60, ಹೇವಾವತಿಯಲ್ಲಿ 14.61, ಕೆಆರ್‌ಎಸ್ 9.93 ಹಾಗೂ ಕಬಿನಿಯಲ್ಲಿ 4.27 ಟಿಎಂಸಿ ಅಡಿಯಷ್ಟು ಮಾತ್ರ ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ಅವಯಲ್ಲಿ ಹಾರಂಗಿಯಲ್ಲಿ 6.47, ಹೇವಾವತಿಯಲ್ಲಿ 23.35, ಕೆಆರ್‌ಎಸ್ 28.35 ಹಾಗೂ ಕಬಿನಿಯಲ್ಲಿ 7.65 ಟಿಎಂಸಿ ಅಡಿಯಷ್ಟು ನೀರಿತ್ತು.

ಬೆಂಗಳೂರು, ಮಂಡ್ಯ, ಮೈಸೂರಿನ ಕುಡಿಯುವ ನೀರಿನ ಜೀವನಾಡಿಯಾಗಿರುವ ಕೆಆರ್‌ಎಸ್ ಜಲಾಶಯದ ನೀರಿನ ಸಂಗ್ರಹ ಗಣನೀಯವಾಗಿ ಕಡಿಮೆಯಾಗಿದೆ. ವಾಡಿಕೆ ಪ್ರಮಾಣದ ಮಳೆ ಯಾಗದಿದ್ದರೆ, ಮುಂದಿನ ದಿನಗಳಲ್ಲಿ ರೈತರು ಹಾಗೂ ನಗರ ಪ್ರದೇಶಗಳ ಜನರು ಕಠಿಣ ದಿನಗಳನ್ನು ಎದುರಿಸಬೇಕಾಗುತ್ತದೆ.

ಕಳೆದ ಒಂದು ವಾರದಿಂದ ಮುಂಗಾರು ಚೇತರಿಸಿಕೊಂಡು ಕರಾವಳಿ ಭಾಗದಲ್ಲಿ ಮಳೆಯುಗುತ್ತಿದೆ. ಒಳನಾಡಿನಲ್ಲೂ ಚದುರಿದಂತೆ ಅಲ್ಲಲ್ಲಿ ಮಳೆಯಾಗುತ್ತಿದೆ. ಆದರೂ ವ್ಯಾಪಕವಾದ ಮಳೆ ರಾಜ್ಯಾದ್ಯಂತ ಬೀಳುತ್ತಿಲ್ಲ. ವಾಡಿಕೆ ಪ್ರಮಾಣದ ಮಳೆಯೂ ಆಗುತ್ತಿಲ್ಲ. ಇದರಿಂದ ಆತಂಕ ಹೆಚ್ಚಾಗುವ ಲಕ್ಷಣಗಳೇ ಗೋಚರಿಸುತ್ತಿವೆ.

ರಾಜ್ಯದ ಪ್ರಮುಖ ಜಲಾಶಯಗಳಲ್ಲಿ 865.20 ಟಿಎಂಸಿ ಅಡಿ ಸಾಮಥ್ರ್ಯದ ನೀರು ಸಂಗ್ರಹಿಸಬಹುದು. ನಿನ್ನೆಯವರೆಗೆ ಕೇವಲ 151.97 ಟಿಎಂಸಿ ಅಡಿಯಷ್ಟು ಮಾತ್ರ ಜಲಾಶಯಗಳಲ್ಲಿ ನೀರಿದೆ. ಕಳೆದ ವರ್ಷ ಇದೇ ಅವಯಲ್ಲಿ 279.68 ಟಿಎಂಸಿ ಅಡಿ ನೀರಿತ್ತು. ಅಂದರೆ ಸುಮಾರು ಅರ್ಧದಷ್ಟು ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆ ಇದೆ. ಎಲ್ಲಾ ಜಲಾಶಯಗಳ ಒಳ ಹರಿವು 1510 ಕ್ಯುಸೆಕ್ಸ್ ಇದ್ದರೆ, ಹೊರ ಹರಿವು 9525ಕ್ಯುಸೆಕ್‌ನಷ್ಟು ಇದೆ.

ತುಂಗಾಭದ್ರಾ, ಘಟಪ್ರಭಾ, ಮಲಪ್ರಭಾ, ಆಲಮಟ್ಟಿ, ನಾರಾಯಣಪುರ ಜಲಾಶಯಗಳಿಗೆ ಈತನಕ ಒಳಹರಿವು ಪ್ರಾರಂಭವಾಗಿಲ್ಲ. ಜಲ ವಿದ್ಯುತ್ ಉತ್ಪಾದಿಸುವ ವರಾಹಿ ಜಲಾಶಯಕ್ಕೆ ಒಳಹರಿವಿಲ್ಲ. ಲಿಂಗನಮಕ್ಕಿ ಹಾಗೂ ಸೂಪ ಜಲಾಶಯಕ್ಕೂ ಅಲ್ಪ ಪ್ರಮಾಣದ ಒಳಹರಿವಿದೆ. ಕೃಷ್ಣಾ ಕೊಳ್ಳದ ಜಲಾಶಯಗಳಲ್ಲಿ ಕೇವಲ 74.94 ಟಿಎಂಸಿ ಅಡಿ ನೀರಿದೆ. ಕಳೆದ ವರ್ಷ ಇದೇ ಅವಯಲ್ಲಿ 175.29 ಟಿಎಂಸಿ ಅಡಿಯಷ್ಟು ನೀರಿತ್ತು. ಅಂದರೆ ನೂರು ಟಿಎಂಸಿ ಅಡಿಯಷ್ಟು ಕಡಿಮೆ ಇದೆ.

ಇದರಿಂದ ಕುಡಿಯುವ ನೀರು, ಬೆಳೆಗಳಿಗೆ ಹಾಗೂ ವಿದ್ಯುತ್ ಉತ್ಪಾದನೆಗೆ ತೊಂದರೆ ಉಂಟಾಗಲಿದೆ. ಒಂದು ವೇಳೆ ಮುಂಗಾರು ಚೇತರಿಸಿಕೊಂಡು ವಾಡಿಕೆಯಷ್ಟು ಮಳೆಯಾಗದಿದ್ದರೆ ರಾಜ್ಯ ಕಷ್ಟದ ಪರಿಸ್ಥಿತಿ ಎದುರಿಸಬೇಕಾಗುತ್ತದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಸಂಸ್ಥಾಪಕ ಹಾಗೂ ನಿವೃತ್ತ ವಿಶೇಷ ನಿರ್ದೇಶಕ ವಿ.ಎಸ್.ಪ್ರಕಾಶ್ ಅವರ ಪ್ರಕಾರ ರಾಜ್ಯದಲ್ಲಿ ಉತ್ತಮ ಮಳೆಯಾಗುವ ಲಕ್ಷಣಗಳು ಗೋಚರಿಸುತ್ತಿಲ್ಲ. ಈಗಿರುವ ಮಾಹಿತಿ ಪ್ರಕಾರ ಬರದ ಛಾಯೆ ಹೆಚ್ಚಾಗುವ ಲಕ್ಷಣಗಳೇ ಗೋಚರಿಸುತ್ತಿವೆ. ಆತಂಕ ಸನ್ನಿವೇಶ ಹೆಚ್ಚಾಗುವ ಸಾಧ್ಯತೆಗಳೇ ಕಂಡುಬರುತ್ತಿವೆ. ಇನ್ನೊಂದು ವಾರ ಕಳೆದರೆ ಜೂನ್ ತಿಂಗಳು ಮುಗಿಯುತ್ತದೆ. ಅಷ್ಟರಲ್ಲಿ ಮಳೆ ಕೊರತೆ ನೀಗುವಷ್ಟು ಮಳೆಯಾಗುವ ಸಾಧ್ಯತೆಗಳು ಗೋಚರಿಸುತ್ತಿಲ್ಲ ಎಂದರು.

ಚಂದನ ಟಿ.ವಿಯ ಮನೋಚಿಂತನ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ನಿಯಾಜ ಅಹ್ಮದ ಎಸ್. ದಫೇದಾರ ಭಾಗಿ

ಬೆಂಗಳೂರು:ಮಾನಸಿಕ ಆರೋಗ್ಯ ಆರೈಕೆ ಅಧಿನಿಯಮ, 2017 ರಡಿಯಲ್ಲಿ ಮಾನಸಿಕ ಆರೋಗ್ಯ ವಿಮರ್ಶಾ ಮಂಡಳಿಯ ಪಾತ್ರ (ROLE OF MENTAL HEALTH REVIEW BOARD UNDER MENTAL HEALTHCARE ACT, 2017) ವಿಷಯ ಕುರಿತು ಜೂನ್ 25 ರಂದು ಮಧ್ಯಾಹ್ನ 2.30ಕ್ಕೆ ಚಂದನ ಟಿವಿಯ ಮನೋಚಿಂತನ ಕಾರ್ಯಕ್ರಮದಲ್ಲಿ ಬೆಂಗಳೂರು ಮತ್ತು ಮೈಸೂರು ವಿಭಾಗದ ಮಾನಸಿಕ ಆರೋಗ್ಯ ವಿಮರ್ಶಾ ಮಂಡಳಿಯ ಅಧ್ಯಕ್ಷರು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ನಿಯಾಜ ಅಹ್ಮದ ಎಸ್. ದಫೇದಾರ,B.Sc., LL.B (Spl.) ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ.

ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ವಿಶೇಷಚೇತನರ ವ್ಯಕ್ತಿಗಳಿಂದ ಮತ್ತು ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು:ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ನವದೆಹಲಿ ವತಿಯಿಂದ 2023ನೇ ಸಾಲಿನಲ್ಲಿ ವಿಶೇಷಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿಶೇಷಚೇತನರ ವ್ಯಕ್ತಿಗಳಿಂದ ಮತ್ತು ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಾಲತಾಣ www.awards.gov.in ಅಥವಾ ಆಯಾ ಜಿಲ್ಲೆಗಳ ಜಿಲ್ಲಾ ವಿಶೇಷಚೇತನರ ಕಲ್ಯಾಣಾಧಿಕಾರಿಗಳನ್ನು ಮತ್ತು ನಿರ್ದೇಶಕರು ವಿಶೇಷಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು, ದೂರವಾಣಿ ಸಂಖ್ಯೆ : 080-22866066, 080-22866046 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಶಾಲಾ ಪ್ರವೇಶ ದಾಖಲೆಗಳಿಗೆ ಹೊಂದಿಕೆಯಾಗದ 15 ಲಕ್ಷ ವಿದ್ಯಾರ್ಥಿಗಳ ಆಧಾರ್ ವಿವರ

ಬೆಂಗಳೂರು: ಶಿಕ್ಷಣ ಇಲಾಖೆಯ ಸೂಚನೆ ಮೇರೆಗೆ ಮಕ್ಕಳು ಶಾಲೆಗಳಿಗೆ ಸಲ್ಲಿಸಿರುವ ಆಧಾರ್ ಕಾರ್ಡ್ (ಂಚಿಜಿಚಿಚಿಡಿ ಅಚಿಡಿಜ) ಪರಿಶೀಲನೆ ವೇಳೆ ಸುಮಾರು 15 ಲಕ್ಷ ವಿದ್ಯಾರ್ಥಿಗಳ ಆಧಾರ್ ಕಾರ್ಡ್‌ನಲ್ಲಿರುವ ಹೆಸರುಗಳು ಶಾಲಾ ದಾಖಲಾತಿ ವೇಳೆ ನಮೂದಿಸಿರುವ ಹೆಸರುಗಳಿಗೆ ಹೊಂದಿಕೆಯಾಗದಿರುವುದು ತಿಳಿದುಬಂದಿದೆ. ಹೀಗಾಗಿ ಪೋಷಕರು ಆಧಾರ್? ಕಾರ್ಡ್‌ಗಳಲ್ಲಿ ಹೆಸರುಗಳನ್ನು ಸರಿಪಡಿಸಬೇಕು ಎಂದು ಅಧಿಕಾರಿಗಳು ಸೂಚಿಸಿದ್ದಾರೆ.

ಕೇಂದ್ರ ಸರ್ಕಾರವು ಫೆಬ್ರವರಿ 17 ರಂದು ಹೊರಡಿಸಿದ ಸುತ್ತೋಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಕಾರ್ಮಿಕ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ವಿವಿಧ ವಿದ್ಯಾರ್ಥಿ ವೇತನಗಳಿಗೆ ಮತ್ತು ವಿವಿಧ ಪ್ರವೇಶ ಪರೀಕ್ಷೆಗಳಿಗೆ ವಿದ್ಯಾರ್ಥಿಗಳ ದಾಖಲಾತಿಗೆ ಆಧಾರ್ ಸಂಖ್ಯೆಯನ್ನು ನವೀಕರಿಸುವಂತೆ ಸೂಚಿಸಿದೆ. ಅದರಂತೆ ಮಕ್ಕಳು ಶಾಲೆಗಳಿಗೆ ಕಡ್ಡಾಯವಾಗಿ ಆಧಾರ್ ಕಾರ್ಡ್ ಸಲ್ಲಿಸಬೇಕು. ಅದರಂತೆ ವಿದ್ಯಾರ್ಥಿಗಳು ಶಾಲೆಗಳಿಗೆ ಆಧಾರ್? ಕಾರ್ಡ್ ಸಲ್ಲಿಕೆ ಮಾಡಿದ್ದರು.

ನಂತರ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ದಾಖಲಾತಿಗೆ ಹೆಸರುಗಳು ಹೊಂದಿಕೆಯಾಗದಿರುವುದನ್ನು ಕಂಡುಕೊಂಡಿದ್ದಾರೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನೀಡಿರುವ ಮಾಹಿತಿ ಪ್ರಕಾರ, 1 ಕೋಟಿಗೂ ಅಧಿಕ ವಿದ್ಯಾರ್ಥಿಗಳ ಪೈಕಿ 78 ಲಕ್ಷ ಮಂದಿಯ ಆಧಾರ್ ಕಾರ್ಡ್‌ಗಳನ್ನು ಪರಿಶೀಲಿಸಲಾಗಿದೆ.

ಉತ್ತರ ಕರ್ನಾಟಕದ ವಿಜಯಪುರ, ಬಾಗಲಕ

ಕರ್ತವ್ಯದಲ್ಲಿದ್ದಾಗ ಪಾನಮತ್ತರಾಗಿ ಸಾರ್ವಜನಿಕರೊಂದಿಗೆ ದುರ್ನಡತೆ: ಮೂವರು ಪೊಲೀಸರ ಅಮಾನತು



ಬೆಂಗಳೂರು: ಕರ್ತವ್ಯನಿರತ ಪೊಲೀಸರು ಮದ್ಯಪಾನ ಮಾಡಿ ಸಾರ್ವಜನಿಕರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ದುರ್ನಡತೆ ತೋರಿದ ಹಿನ್ನೆಲೆಯಲ್ಲಿ ಮೂವರು ಪೊಲೀಸರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಶುಕ್ರವಾರ ಅಮಾನತು ಮಾಡಿದ್ದಾರೆ.

ಮಾಗಡಿ ಪೊಲೀಸ್ ಠಾಣೆಯ ಎಎಸ್ಐ ಮಂಜುನಾಥ್ ಕೆ.ಎನ್, ಚನ್ನಪಟ್ಟಣ ಪುರ ಪೊಲೀಸ್ ಠಾಣೆ ಹೆಡ್ ಕಾನ್‌ಸ್ಟೆಬಲ್ ನಾರಾಯಣ ಮೂರ್ತಿ ಹಾಗೂ ಡಿಸಿಆರ್‌ಬಿ ಘಟಕದ ಎಎಸ್ಐ ಗೋವಿಂದಯ್ಯ ಜಿ.ಎಸ್ ಅಮಾನತುಗೊಂಡವರು. ಈ ಮೂವರೂ ಸಂಬಂಧಿಕರಾಗಿದ್ದಾರೆಂದು ತಿಳಿದು ಬಂದಿದೆ.

ನಾಲ್ಕೈದು ತಿಂಗಳಿಂದ ಕರ್ತವ್ಯಕ್ಕೆ ಗೈರಾಗಿದ್ದ ಮಂಜುನಾಥ್ ಮತ್ತು ನಾರಾಯಣಮೂರ್ತಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದಕ್ಕಾಗಿ, ಎಸ್‌ಪಿ ಕಚೇರಿಗೆ ಗುರುವಾರ ಮಧ್ಯಾಹ್ನ ತೆರಳಿದ್ದರು. ಆದರೆ, ವರದಿ ಮಾಡಿಕೊಳ್ಳದೆ ಕಚೇರಿಯಲ್ಲಿದ್ದ ಗೋವಿಂದಯ್ಯ ಅವರನ್ನು ತಮ್ಮೊಂದಿಗೆ ಕರೆದೊಯ್ದು, ಮದ್ಯದ ಪಾರ್ಟಿ ಮಾಡಿದ್ದಾರೆ.

ಕಂಠಪೂರ್ತಿ ಕುಡಿದ ಮೂವರು ವಾಗಡಿ ಕಡೆಗೆ ತೆರಳುವಾಗ, ಮಾರ್ಗಮಧ್ಯೆ ಸಾರ್ವಜನಿಕರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ದುರ್ನಡತೆ ತೋರಿದ್ದಾರೆ.

ಈ ವೇಳೆ ಕೆಲವರು ಕಾರನ್ನು ಹಿಂಬಾಲಿಸಿಕೊಂಡು ಬಂದು ಅಡ್ಡ ಹಾಕಿ, ಮೂವರನ್ನು ತರಾಟೆಗೆ ತೆಗೆದುಕೊಂಡಿದ್ದರು. ಅಲ್ಲದೆ, ಪೊಲೀಸರ ದುರ್ನಡತೆ ಕುರಿತು ವಿಡಿಯೋವನ್ನು ಮಾಡಿ, ವಿಡಿಯೋ ಸಹಿತ ಅಧಿಕಾರಿಗಳಿಗೆ ದೂರು ನೀಡಿ ದ್ದಾರೆ. ಈ ಕುರಿತ ವಿಡಿಯೋ ಸಾಮಾ ಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ವಿಡಿಯೋದಲ್ಲಿ ಎಎಸ್ಐ ಮಂಜುನಾಥ್ ಅರೆನಗ್ನರಾಗಿದ್ದು, ಇನ್ನಿಬ್ಬರು ತಮ್ಮ ಸಮವಸ್ತ್ರ ಕಳಚಿ ಕಾರಿನಲ್ಲಿ ನೇತು ಹಾಕಿರುವುದು ಕಂಡು ಬಂದಿದೆ.

ಘಟನೆ ಸಂಬಂಧ ಪ್ರಾಥಮಿಕ ವಿಚಾರಣೆ ನಡೆಸಿದ ಎಸ್ಪಿ ಇದೀಗ ಮೂವರನ್ನೂ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

'ಅನ್ನ ಭಾಗ್ಯ'ಕ್ಕೆ ಕೇಂದ್ರದಿಂದ ಸಿಗದ ಸ್ಪಂದನೆ: ಪರ್ಯಾಯ ಮಾರ್ಗಕ್ಕೆ ರಾಜ್ಯ ಸರ್ಕಾರ ಮುಂದು

ಬೆಂಗಳೂರು: ರಾಜ್ಯ ಸರ್ಕಾರದ ಅನ್ನ ಭಾಗ್ಯ ಯೋಜನೆ ಭಾರೀ ಸದ್ದು ಮಾಡುತ್ತಿದೆ. ಸಾರ್ವಜನಿಕರಿಗೆ 10 ಕೆ ಜಿ ಅಕ್ಕಿ ವಿತರಿಸುವುದಾಗಿ ಅಧಿಕಾರಕ್ಕೆ ಬರುವ ಮೊದಲು ಭರವಸೆ ನೀಡಿದ್ದ ಕಾಂಗ್ರೆಸ್ ಪಕ್ಷ ಈಗ ಅಧಿಕಾರಕ್ಕೆ ಬಂದ ಮೇಲೆ 10 ಕೆಜಿ ವಿತರಿಸಲು ಎಲ್ಲಿಂದ ತರುವುದು ಎನ್ನುವುದೇ ಸಮಸ್ಯೆಯಾಗಿದೆ.

ಕೇಂದ್ರ ಸರ್ಕಾರದ ಮೇಲೆ ನಿರೀಕ್ಷೆಯಿಂದ ನಿನ್ನೆ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪಿಯೂಷ್ ಗೋಯಲ್ ಅವರನ್ನು ರಾಜ್ಯ ಆಹಾರ, ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ಕೆ ಹೆಚ್ ಮುನಿಯಪ್ಪ ಭೇಟಿ ಮಾಡಿ ಮನವಿ ಮಾಡಿಕೊಂಡಿದ್ದರು.

ಕರ್ನಾಟಕಕ್ಕೆ ಭಾರತೀಯ ಆಹಾರ ನಿಗಮ (FCI) ಮೂಲಕ ಅಕ್ಕಿ ಸರಬರಾಜು ಮಾಡಲು ನಿರಾಕರಿಸಿದ ಹಿನ್ನೆಲೆ ಯಲ್ಲಿ ಮುನಿಯಪ್ಪ ಅವರು 2.28 ಲಕ್ಷ ಮೆಟ್ರಿಕ್ ಟನ್‌ಗಳನ್ನು ಸಂಗ್ರಹಿಸುವ ಮಾರ್ಗವನ್ನು ಕಂಡುಕೊಂಡಿದ್ದಾರೆ.

ಭಾರತ ದೇಶದಲ್ಲಿ ಅಕ್ಕಿ ಬೆಳೆಯುವವರು ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಅಕ್ಕಿ ಸಂಗ್ರಹಿಸಲು ನಮ್ಮಲ್ಲಿ ಹಲವು ಮಾರ್ಗಗಳಿವೆ. ನಾವು ಒಂದು ವಾರದಲ್ಲಿ ಸಮಸ್ಯೆಯನ್ನು ಪರಿಹರಿಸುತ್ತೇವೆ ಎಂದು ನಿನ್ನೆ ದೆಹಲಿಯಲ್ಲಿ ಮಾತನಾಡಿದ ಸಚಿವ ಮುನಿಯಪ್ಪ ಹೇಳಿದರು.

ರಾಜ್ಯವು ಅಕ್ಕಿಯನ್ನು ಮುಕ್ತ ಮಾರುಕಟ್ಟೆಯಿಂದ ಖರೀದಿಸಲಿದೆ ಎಂಬ ಮಾತುಗಳನ್ನು ನಿರಾಕರಿಸಿದ್ದಾರೆ. ಏಕೆಂದರೆ ಅದು ದುಬಾರಿ ಮತ್ತು ರಾಜ್ಯದ ಬೊಕ್ಕಸಕ್ಕೆ ಹೊರೆಯಾಗುತ್ತದೆ. ಕೇಂದ್ರೀಯ ಸಂಸ್ಥೆಗಳಿಂದ ಟೆಂಡರ್ ಕರೆದು ವರ್ತಕರಿಂದ ಅಕ್ಕಿ ಖರೀದಿಸಿ ಸರ್ಕಾರಕ್ಕೆ ರವಾನಿಸುವುದು ಸೂಕ್ತವೆಂದು ಹೇಳುತ್ತಾರೆ.

ಕರ್ನಾಟಕದಲ್ಲಿ ಅಕ್ಕಿ ದಾಸ್ತಾನು ಹೊಂದಿರುವ ಕೆಲವು ವ್ಯಾಪಾರಿಗಳು ಸಹ ಸರಬರಾಜು ಮಾಡಲು ಉತ್ಸುಕರಾಗಿದ್ದಾರೆ ಎಂದು ಮೂಲಗಳು ಖಿಓಖಇಗೆ ತಿಳಿಸಿವೆ. ಎಲ್ಲವೂ ಸರಿಯಾಗಿ ನಡೆದರೆ, ಆಗಸ್ಟ್ 1 ರೊಳಗೆ ಸರ್ಕಾರ ಅನ್ನಭಾಗ್ಯ ಯೋಜನೆಯನ್ನು ಪ್ರಾರಂಭಿಸುವ ಸಾಧ್ಯತೆಯಿದೆ.

ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟ (NCCF), ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ (NAFD) ಮತ್ತು ಕೇಂದ್ರೀಯ ಭಂಡಾರ್ ನ್ನು ರಾಜ್ಯ ಸರ್ಕಾರ ಈಗಾಗಲೇ ಸಂಪರ್ಕಿಸಿದೆ.

ನಿನ್ನೆ ಕೇಂದ್ರ ಸಚಿವರ ಜೊತೆ ಅರ್ಧ ಗಂಟೆ ಚರ್ಚೆಯ ನಂತರ, ಗೋಯಲ್ ರಾಜ್ಯಕ್ಕೆ ಅಕ್ಕಿಯನ್ನು ಪೂರೈಸಲು ಸಾಧ್ಯವಿಲ್ಲ ಎಂದು ಹೇಳಿದರು. ಇಡೀ ದೇಶಕ್ಕೆ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ 135 ಲಕ್ಷ ಮೆಟ್ರಿಕ್ ಟನ್ ಅಗತ್ಯವಿದೆ. ಎಫ್ ಸಿಐಯಲ್ಲಿ 262 ಲಕ್ಷ ಟನ್ ಗಿಂತ ಹೆಚ್ಚು ದುಪ್ಪಟ್ಟು ಸಂಗ್ರಹ ಇರುವುದರಿಂದ ಇದು ಏಕೆ ಸಾಧ್ಯವಿಲ್ಲ ಎಂದು ನಾನು ಕೇಳಿದೆ. ಕೇಂದ್ರ ಸರ್ಕಾರ 400 ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಅಗತ್ಯವಿದೆ ಎಂದು ಅವರು ಸಮರ್ಥಿಸಿಕೊಂಡರು. ಕೇಂದ್ರ ಸಚಿವರ ಸಮರ್ಥನೆ ಸರಿಯಿಲ್ಲ ಎಂದರು.

'ಗೃಹ ಜ್ಯೋತಿ' ಯೋಜನೆ ನೋಂದಣಿಗೆ 20 ರೂ.ಗಿಂತ ಹೆಚ್ಚುವರಿ ಹಣ ವಸೂಲಿ ಮಾಡಿದರೆ ಕಠಿಣ ಕ್ರಮ: ಸರ್ಕಾರದ ಎಚ್ಚರಿಕೆ

ಬೆಂಗಳೂರು: ರಾಜ್ಯದಲ್ಲಿ ಗ್ರಾಹಕರಿಗೆ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನ್ನು ಒದಗಿಸುವ ಗೃಹ ಜ್ಯೋತಿ ಯೋಜನೆಗೆ ನೋಂದಣಿ ಮಾಡಿಸುವಾಗ ಹಣ ಕೇಳುವವರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ರಾಜ್ಯ ಸರ್ಕಾರ ಎಚ್ಚರಿಕೆ ನೀಡಿದೆ.

ಗೃಹ ಜ್ಯೋತಿಯ ನೋಂದಣಿ ಸಂಪೂರ್ಣ ಉಚಿತವಾಗಿದೆ, ಸರ್ಕಾರ ನಿಗದಿಪಡಿಸಿದ ಸೇವಾ ಶುಲ್ಕ 20 ರೂಪಾಯಿಗಳನ್ನು ಹೊರತುಪಡಿಸಿ ನೋಂದಣಿಗಾಗಿ ಗ್ರಾಹಕರು ಹೆಚ್ಚುವರಿ ಮೊತ್ತವನ್ನು ಪಾವತಿಸಬೇಕಾಗಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬೆಂಗಳೂರು ಒನ್ ಕೇಂದ್ರಗಳಲ್ಲಿ ಗ್ರಾಹಕರಿಂದ 20 ರೂಪಾಯಿಗಿಂತ ಹೆಚ್ಚುವರಿ ನೋಂದಣಿ ಶುಲ್ಕ ವಸೂಲಿ ಮಾಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ. ಯಾವುದೇ ಕೇಂದ್ರಗಳು ನಿಯಮಗಳನ್ನು ಉಲ್ಲಂಘಿಸಿರುವುದು ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಸರ್ಕಾರದ ಅಧಿಕೃತ ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಲಾಗಿದೆ.

ನಿನ್ನೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ್ದ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಗೃಹ ಜ್ಯೋತಿ ಯೋಜನೆಗೆ ಅರ್ಜಿ ಸಲ್ಲಿಸುವ ಸಾರ್ವಜನಿಕರಿಂದ ಹಣ ಪಡೆದ 'ವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದರು.

ನಂತರ ಈ ಬಗ್ಗೆ ಟ್ವೀಟ್ ಕೂಡ ಮಾಡಿರುವ ಅವರು ಗೃಹ ಜ್ಯೋತಿ ಯೋಜನೆಗೆ ಅರ್ಜಿ ಹಾಕಲು ಕೆಲವರು ವೈಯಕ್ತಿಕವಾಗಿ ಹಾಗೂ ಕೆಲವು ಏಜೆನ್ಸಿ ಮೂಲಕ ಸಾರ್ವಜನಿಕರಿಂದ ಹಣ ಪಡೆಯುತ್ತಿರುವ ಬಗ್ಗೆ ದೂರುಗಳು ಕೇಳಿಬಂದಿವೆ. ಅರ್ಜಿ ಸಲ್ಲಿಸಲು ನೀವು ಯಾರಿಗೂ ಲಂಚ ನೀಡಬೇಕಾಗಿಲ್ಲ. ನೀವೇ ನಿಮ್ಮ ಮೊಬೈಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಇದಕ್ಕೆ ಸಾರ್ವಜನಿಕರಿಂದ ಹಣ ಪಡೆಯುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.

34 ಲಕ್ಷ ಮಂದಿ ನೋಂದಣಿ: ಗೃಹ ಜ್ಯೋತಿ ಯೋಜನೆಗೆ ಮೊನ್ನೆ ನಿನ್ನೆ ಶುಕ್ರವಾರದವರೆಗೆ 30 ಲಕ್ಷ ಗ್ರಾಹಕರು ಸೇವಾ ಸಿಂಧು ಪೋರ್ಟಲ್ ನಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ.

ಲಬಿಬಿಎಂಪಿ ವಾರ್ಡ್ ಮರು ವಿಂಗಡಣೆಗೆ ಮತ್ತೊಮ್ಮೆ ಆಯೋಗ ರಚನೆ, ಚುನಾವಣೆ ಮತ್ತಷ್ಟು ವಿಳಂಬ!

ಬೆಂಗಳೂರು: ಬೆಂಗಳೂರಿನ ಸ್ಥಳೀಯ ಆಡಳಿತ ಸಂಸ್ಥೆ ಬೃಹತ್ ಬೆಂಗ ಳೂರು ಮಹಾನಗರ ಪಾಲಿಕೆ ವಾರ್ಡ್ ಮರು ವಿಂಗಡಣೆಗೆ ರಾಜ್ಯ ಸರ್ಕಾರ 'ದಿಂದ ಆಯೋಗವನ್ನು ರಚಿಸಿ ಆದೇಶ ಹೊರಡಿಸಿದೆ. 12 ವಾರಗಳಲ್ಲಿ ವಾರ್ಡ್ ಮರುವಿಂಗಡಣಾ ವರದಿಯನ್ನು ಸಲ್ಲಿಸಲು ಸೂಚನೆ ನೀಡಲಾಗಿದೆ.

2020ರ ಸೆಪ್ಟಂಬರ್‌ನಲ್ಲಿ ಬಿಬಿಎಂಪಿ ಸದಸ್ಯರ (ಕಾರ್ಪೋರೇಟರ್‌ಗಳ) ಅಧಿಕಾರ ಪೂರ್ಣಗೊಂಡಿದೆ. ಚುನಾವಣೆ ನಡೆಸುವ ದೃಷ್ಟಿಯಿಂದ 198 ವಾರ್ಡ್‌ಗಳಿಗೆ ವಾರ್ಡ್ ಪುನರ್‌ವಿಂಗಡಣೆ ಮಾಡಲಾಗಿತ್ತು. ನಂತರ, ಆಡಳಿತಾತ್ಮಕ ದೃಷ್ಟಿಕೋನದಿಂದ ಬಿಬಿಎಂಪಿ-2020 ಹೊಸ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಈ ವೇಳೆ ಬಿಬಿಎಂಪಿ ವ್ಯಾಪ್ತಿಯನ್ನು 243 ವಾರ್ಡ್‌ಗಳನ್ನಾಗಿ ಮಾಡಿ ರಚನೆ ಮಾಡಲಾಯಿತು. ನಂತರ ಚುನಾವಣೆ ದೃಷ್ಟಿಯಿಂದ ವಾರ್ಡ್‌ಗಳ ಮರುವಿಂಗಡಣೆ ಮಾಡಲಾಯಿತು. ಆದರೆ, ವಾರ್ಡ್ ಮರುವಿಂಗಡಣೆ ಸೂಕ್ತವಾಗಿಲ್ಲ ಎಂದು ಮಾಜಿ ಪಾಲಿಕೆ ಸದಸ್ಯರು ಕೋರ್ಟ್ ಮೊರೆ ಹೋಗಿದ್ದರು.

ಈ ಸಂಬಂಧ ವಿಚಾರಣೆ ನಡೆಸಿದ ಹೈಕೋರ್ಟ್, ತಪ್ಪುಗಳನ್ನು ಸರಿಪಡಿಸಿ 12 ವಾರಗಳಲ್ಲಿ ಹೊಸದಾಗಿ ವಾರ್ಡ್‌ಗಳ ಮರುವಿಂಗಡಣೆ ಮಾಡುವಂತೆ ಆದೇಶ ಹೊರಡಿಸಿತ್ತು. ಈ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರವು ಇದೀಗ ಮತ್ತೊಮ್ಮೆ (ಮೂರನೇ ಬಾರಿಗೆ) ಬಿಬಿಎಂಪಿ ವಾರ್ಡ್‌ಗಳ ಮರುವಿಂಗಡಣೆಗೆ ಆಯೋಗವನ್ನು ರಚಿಸಿ ಆದೇಶ ಹೊರಡಿಸಿದೆ.

ಹೈಕೋರ್ಟ್ ಸೂಚನೆಯಂತೆ ವಾರ್ಡ್ ಪುನರ್ ವಿಂಗಡನೆಯ ಹಳೆ ಅಧಿಸೂಚನೆಯನ್ನ ಕೈಬಿಟ್ಟ ರಾಜ್ಯ ಸರ್ಕಾರ, ಹೊಸದಾಗಿ ವಾರ್ಡ್‌ಗಳ ಡಿಲಿಮಿಟೇಶನ್‌ಗೆ ಆಯೋಗ ರಚಿಸಿ ಆದೇಶ ಹೊರಡಿಸಿದೆ.

ಹೈಕೋರ್ಟ್ ಆದೇಶದಂತೆ 12 ವಾರಗಳಲ್ಲಿ ವಾರ್ಡ್‌ಗಳ ಪುನರ್ ವಿಂಡಗನೆ ಮಾಡಲು ನೂತನ ಆಯೋಗಕ್ಕೆ ಸೂಚನೆ ನೀಡಿದೆ.

ಸರ್ಕಾರ ರಚಿಸಿದ ಪುನರ್ ಆಯೋಗದಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ರು ಅಧ್ಯಕ್ಷರಾಗಿದ್ದಾರೆ. ಜೊತೆಗೆ, ಬಿಡಿಎ ಆಯುಕ್ತರು, ಬೆಂಗಳೂರು ಜಿಲ್ಲಾಧಿಕಾರಿ ಮತ್ತು ಬಿಬಿಎಂಪಿ ಕಂದಾಯ ವಿಭಾಗದ ಆಯುಕ್ತರನ್ನು ಸದಸ್ಯರನ್ನಾಗಿ ಮಾಡಲಾಗಿದೆ.

ಬ್ರ್ಯಾಂಡ್ ಬೆಂಗಳೂರು: ಮಾಜಿ ಸಿಎಂ ಬೊಮ್ಮಾಯಿ ಭೇಟಿಯಾಗಿ ಸಲಹೆ ಪಡೆದ ಡಿ.ಕೆ. ಶಿವಕುಮಾರ್

ಬೆಂಗಳೂರು: ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಲ್ಲಿ ರಾಜ್ಯ ರಾಜಧಾನಿ ಬೆಂಗಳೂರು ಅಭಿವೃದ್ಧಿಗೆ ಮುಂದಾಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಶುಕ್ರವಾರ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರೊಂದಿಗೆ ಮಾತುಕತೆ ನಡೆಸಿದರು.

ಬೊಮ್ಮಾಯಿ ಅವರ ರೇಸ್ ಕೋರ್ಸ್ ರಸ್ತೆಯ ಸರ್ಕಾರಿ ರೇಸ್‌ವ್ಯೂ ಕಾಟೇಜ್‌ಗೆ ಭೇಟಿ ನೀಡಿದ ಡಿ.ಕೆ. ಶಿವಕುಮಾರ್ ಅವರನ್ನು ಹೂಗುಚ್ಛ ನೀಡಿ ಬೊಮ್ಮಾಯಿ ಅವರು ಸ್ವಾಗತ ಕೋರಿದರು.

ಇದಕ್ಕೆ ಪ್ರತಿಯಾಗಿ ಬೊಮ್ಮಾಯಿ ಅವರಿಗೂ ಶಾಲು ಹೊದಿಸಿ, ಹೂಗುಚ್ಛ ನೀಡಿದ ಡಿಕೆ.ಶಿವಕುಮಾರ್ ಅವರು ಧನ್ಯವಾದ ತಿಳಿಸಿದರು.

ಬಳಿಕ ಉಭಯ ನಾಯಕರು ಕೆಲಕಾಲ ಪರಸ್ಪರ ಉಭಯ ಕುಶಲೋಪರಿ ವಿಚಾರಿಸಿದರು. ಬಳಿಕ ಬ್ರ್ಯಾಂಡ್ ಬೆಂಗಳೂರು ಸಂಬಂಧ ಉಭಯ ನಾಯಕರು ಮಾತುಕತೆ ನಡೆಸಿದರು.

ಮಾತುಕತೆ ವೇಳೆ ಬೆಂಗಳೂರು ಅಭಿವೃದ್ಧಿ ಕುರಿತು ಯಾವ ರೀತಿಯ ಯೋಜನೆ ಜಾರಿಗೆ ತರಬಹುದು ಎನ್ನುವುದು ಸೇರಿದಂತೆ ನಗರದ ಅಭಿವೃದ್ಧಿಗೆ ಪೂರಕವಾಗಿ ಅಗತ್ಯ ಸಲಹೆಗಳನ್ನು ಡಿಕೆ.ಶಿವಕುಮಾರ್ ಅವರು ಪಡೆದುಕೊಂಡರು.

ಈ ಹಿಂದೆ ಸಿಎಂ ಆಗಿ ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಬಸವರಾಜ ಬೊಮ್ಮಾಯಿ ಕೆಲಸ ನಿರ್ವಹಿಸಿದ್ದರು. ಈಗ ತಾವು ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿರುವ ಕಾರಣ ಬೊಮ್ಮಾಯಿ ಅವರಿಂದ ಬ್ರ್ಯಾಂಡ್ ಬೆಂಗಳೂರು ಸಂಬಂಧ ಸಮಾಲೋಚನೆ ನಡೆಸಿ ಸಲಹೆಗಳನ್ನು ಪಡೆದುಕೊಂಡಿದ್ದಾರೆ.

ಮಾತುಕತೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು 2 ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಗಳಾಗಿ, ಬೆಂಗಳೂರಿನ ಅಭಿವೃದ್ಧಿಗೆ ಕೆಲವು ಉತ್ತಮ ಯೋಜನೆ ಹಾಕಿಕೊಂಡಿದ್ದರು. ಆ ಯೋಜನೆಗಳು ಇನ್ನೂ ಜಾರಿಯಾಗಿಲ್ಲ. ಹೀಗಾಗಿ ಅವರನ್ನು ಭೇಟಿ ಮಾಡಿ ಅವರ ಸಲಹೆ, ಅಭಿಪ್ರಾಯ ಪಡೆದಿದ್ದೇನೆ ಎಂದು ಹೇಳಿದರು.ಉಪ ಮುಖ್ಯಮಂತ್ರಿಯಾದ ಬಳಿಕ ಮಾಜಿ ಮುಖ್ಯಮಂತ್ರಿಗಳಾಗಿ ಬೆಂಗಳೂರು ಅಭಿವೃದ್ಧಿಗೆ ತಮ್ಮದೇ ಆದ ಯೋಜನೆಗಳನ್ನು ಹಾಕಿಕೊಂ ಡಿದ್ದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು, ಎಸ್.ಎಂ. ಕೃಷ್ಣ, ಬಿ.ಎಸ್. ಯಡಿಯೂರಪ್ಪ, ಜಗದೀಶ್ ಶೆಟ್ಟರ್ ಅವರನ್ನು ಭೇಟಿ ಮಾಡಿದ್ದೇನೆ. ಬೆಂಗಳೂರು ಅಭಿವೃದ್ಧಿ ಕುರಿತು ಚರ್ಚಿಸಿ ಸಲಹೆ ಪಡೆದುಕೊಂ ಡಿದ್ದೇ ನೆ. ಆದರೆ ಕುಮಾರಸ್ವಾಮಿ ಅವರು ಇರಲಿಲ್ಲ. ಸಾಧ್ಯವಾದರೆ ಅವರನ್ನೂ ಭೇಟಿ ಮಾಡುತ್ತೇನೆ. ಎಲ್ಲರ ಅನುಭವ ಅವರ ವಿಚಾರಧಾರೆ ಕೇಳಿ ಪಡೆಯು ತ್ತೇನೆ. ಬ್ರ್ಯಾಂಡ್ ಬೆಂಗಳೂರು ಮಾಡು ವುದು ನನ್ನ ಗುರಿ. ಹಾಗಾಗಿ ಎಲ್ಲ ಪಕ್ಷಗಳ ನಾಯಕರ ಭೇಟಿ ಮಾಡಿ ಸಲಹೆ ಪಡೆದುಕೊಳ್ಳಲಿದ್ದೇನೆ ಎಂದು ತಿಳಿಸಿದರು.

ಎಸ್‌ಇಪಿ ಅನುದಾನವನ್ನು ಸಮರ್ಪಕವಾಗಿ ಬಳಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಸಚಿವ ಡಾ.ಹೆಚ್‌ಸಿ ಮಹದೇವಪ್ಪ

ಬೆಂಗಳೂರು: ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ ಮಹದೇವಪನವರು ವಿಕಾಸ ಸೌಧ ದಲ್ಲಿ ಸರ್ಕಾರದ ಎಲ್ಲಾ ಇಲಾಖೆ ಗಳ ಉನ್ನತ ಅಧಿಕಾರಿಗಳ ಜೊತೆ ಸಭೆ ನಡೆಸಿ, ಎಸ್‌ಇಪಿ ಯೋಜನೆಯಡಿಯಲ್ಲಿನ ಎಲ್ಲಾ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿಗಳ ಸಮಗ್ರ ಅಭಿವೃದ್ಧಿಗಾಗಿ ಇರುವ ಅನುದಾನವನ್ನು ಸಮರ್ಪಕವಾಗಿ ಬಳಸಬೇಕೆಂದು ಕಟ್ಟು ನಿಟ್ಟಿನ ಸೂಚನೆ ನೀಡಿದ್ದು, ಅದರಲ್ಲೂ ಪರಿಶಿಷ್ಟ ಜಾತಿಯ ಜನರ ಶಿಕ್ಷಣ, ಆರೋಗ್ಯ, ಆಹಾರ, ಕೌಶಲ್ಯ ತರಬೇತಿಯೊಂದಿಗೆ ಅವರ ಘನತೆಯುಕ್ತ ಬದುಕಿಗೆ ಪೂರಕವಾಗಿ ಆಡಳಿತವನ್ನು ನೀಡಬೇಕೆಂದು ತಿಳಿಸಿದರು.

SCP ಅನುದಾನದ ಸಮರ್ಪಕ ಬಳಕೆಗೆ ಸೂಚನೆ

ಪರಿಶಿಷ್ಟ ಜಾತಿ ವರ್ಗದ ಜನರ ಏಳಿಗೆಗಾಗಿ ಈ ಹಿಂದೆ ಜಾರಿಗೊಳಿಸಲಾಗಿದ್ದ ಎಸ್‌ಇಪಿ ಕಾಯ್ದೆಯ ಹಣವನ್ನು ಬೇರೆ ಇಲಾಖೆಗಳಿಗೆ ವರ್ಗಾಯಿಸಿ ರುವುದು SCP ಕಾಯ್ದೆಯ ಆಶ ಯಕ್ಕೆ ವಿರುದ್ಧವಾಗಿದ್ದು, ಈ ಕಾಯ್ದೆಯ ನಿಯಮಾವಳಿಯಂತೆ ಖಅಕ ಕಾಯ್ದೆಯ ಹಣವನ್ನು ಪರಿಶಿಷ್ಟ ಜಾತಿಯ ಜನರ ಏಳಿಗೆಗೆ ಮಾತ್ರವೇ ಬಳಸಬೇಕು ಎಂದು ಸಚಿವರು ಅಧಿಕಾರಿಗಳನ್ನು ತರಾಟೆಗ